MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

YUVA MARGA KANNADA DAILY NEWS PAPER

ಸಂಪುಟ: 04 | ಸಂಚಿಕೆ: 284 | ಗುರುವಾರ : 28-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 284 | THURSDAY : 28-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಏಕಲವ್ಯ ವಸತಿ ಶಾಲೆ ಪ್ರಿನ್ಸಿಪಾಲ್ ನಿಂದ ಅಡುಗೆ ಸಿಬ್ಬಂದಿಗೆ ಕಿರುಕುಳ....?

ಯುವ ಮಾರ್ಗ ಸುದ್ದಿ

**ಅರಕೇರಾ,ಆ.27–** ತಾಲೂಕಿನ ಕೊತ್ತದೊಡ್ಡಿ ಏಕಲವ್ಯ ಮಾದರಿ ವಸತಿ ಶಾಲೆ ಪ್ರಿನ್ಸಿಪಾಲ್ ಸುರೇಶ ವರ್ಮಾ ಅವರು ಪತ್ರಕರ್ತರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿದ ಪ್ರಕರಣ ಮಾಸುವ ಮುನ್ನವೇ ಶಾಲಾ ಸಿಬ್ಬಂದಿಗೆ ನಿರಂತರ ಮಾನಸಿಕ ಕಿರುಕುಳ ನೀಡುತ್ತಿದ್ದಾನೆ ಎಂಬ ಆರೋಪ ಬೆಳಕಿಗೆ ಬಂದಿದೆ.

ಕೊತ್ತದೊಡ್ಡಿ ಇಎಂಆರ್‌ಎಸ್ ಸುಮಾರು 35 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಅನಾರೋಗ್ಯ ಸಂಭವಿಸಿ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ತಪಾಸಣೆಗೆಂದು ಬಂದಾಗ ವಿಡಿಯೋ, ಫೋಟೊ ಸಂಗ್ರಹಿಸಿದ್ದ ಸ್ಥಳೀಯ ಪತ್ರಕರ್ತರನ್ನು ಮನಬಂದಂತೆ ಅವಾಚ್ಯ ಪದಗಳಿಂದ ನಿಂದಿಸಿದ್ದರು. ಇದೀಗ ಶಾಲೆಯ ಸಿಬ್ಬಂದಿಯನ್ನು ಸರಿಯಾಗಿ ನಡೆಸಿಕೊಳ್ಳುತ್ತಿಲ್ಲ. ದುರಾಡಳಿತ ಮಾಡುತ್ತಿದ್ದಾನೆ ಎಂದು ಅಡುಗೆ ಸಿಬ್ಬಂದಿ ಶಾಲೆಗೆ ಭೇಟಿ ನೀಡಿದ ಅಧಿಕಾರಿಗಳೊಂದಿಗೆ ಮಾತನಾಡಿದ ವಿಡಿಯೋ ಎಲ್ಲೆಡೆ ವೈರಲ್ ಆಗಿದೆ.

ಬೋಧಕ, ಬೋಧಕೇತರ ಹಾಗೂ ಅಡುಗೆ ಸಿಬ್ಬಂದಿಗೆ ಪ್ರಿನ್ಸಿಪಾಲ ಸುರೇಶ ವರ್ಮಾ ನೀಡುತ್ತಿರುವ ಕಿರುಕುಳಕ್ಕೆ ಬೇಸತ್ತಿದ್ದಾರೆ. ಪ್ರಿನ್ಸಿಪಾಲ್ ವರ್ತನೆಯಿಂದ ಸಿಬ್ಬಂದಿ ರೋಸಿ ಹೋಗಿದ್ದಾರೆ. ಪ್ರಿನ್ಸಿಪಾಲ್ ತನಗಿರುವ ಜವಬ್ದಾರಿ ಮತ್ತು ಅಧಿಕಾರವನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ. ದುರ್ವತನೆಯಿಂದ ಶಾಲೆಯಲ್ಲಿ ಸಿಬ್ಬಂದಿ ಕೆಲಸ ಮಾಡುವುದಕ್ಕೆ ಭಯಭೀತರಾಗಿದ್ದಾರೆ.

ಪ್ರಿನ್ಸಿಪಾಲ್ ವಿರುದ್ಧ ಸಿಬ್ಬಂದಿ ಮತ್ತು ಗ್ರಾಮದ ಕೆಲವರು ಹಲವು ಬಾರಿ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಇತ್ತೀಚೆಗೆ ಪ್ರಿನ್ಸಿಪಾಲ್ ದುರ್ವತನೆ ಖಂಡಿಸಿ ಅಡುಗೆ ಸಿಬ್ಬಂದಿ ಪ್ರತಿಭಟನೆ ನಡೆಸಿದ್ದರು. ಇದರಿಂದ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿ ಮಾಹಿತಿ ಪಡೆದು ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಿದ್ದಾರೆ. ಅಧಿಕಾರಿಗಳಿಗೆ ಶಾಲೆಯಲ್ಲಿರುವ ಸಮನ್ವಯ ಕೊರತೆಯನ್ನು ಸರಿಪಡಿಸಲು ಸಾಧ್ಯವಾಗುತ್ತಿಲ್ಲ. ಪ್ರಿನ್ಸಿಪಾಲ್ ಸುರೇಶ ವರ್ಮಾ ಯಾವ ಅಧಿಕಾರಿಗಳಿಗೂ ಜಗ್ಗಲ್ಲ, ಬಗ್ಗಲ್ಲ ಎನ್ನುತ್ತಿದ್ದಾರೆ. ಇದರಿಂದ ಮಕ್ಕಳ ಶೈಕ್ಷಣಿಕ ಪ್ರಗತಿಗೂ ಹಿನ್ನಡೆಯಾಗುವ ಸಾಧ್ಯತೆ ಇದೆ. ಇದರಿಂದ ಜನಪ್ರತಿನಿಧಿಗಳು ಮಧ್ಯ ಪ್ರವೇಶಿಸಿ ಪ್ರಿನ್ಸಿಪಾಲ್ ವಿರುದ್ಧ ಕ್ರಮಕ್ಕೆ ಆಗ್ರಹಿಸುತ್ತಾರಾ ಎನ್ನುವ ಪ್ರಶ್ನೆ ಕಾಡುತ್ತಿದೆ.




**ವೈರಲ್ ಆದ ವಿಡಿಯೋದಲ್ಲಿ ಏನಿದೆ?**

ಮಹಿಳಾ ಸಿಬ್ಬಂದಿ ಮೇಲೆ ಒಂದಲ್ಲ ಒಂದು ರೀತಿಯಲ್ಲಿ ಅರೆಸ್ಮೆಂಟ್ ನಡೆಯುತ್ತಿದೆ. ಮಹಿಳಾ ಸಿಬ್ಬಂದಿಗೆ ಒಡೆಯಲು ಬರುತ್ತಾನೆ. ಅಡುಗೆ ತಯಾರಿಸುವಾಗ ಬೆನ್ನ ಹಿಂದೆ ನಾಲ್ವರನ್ನು ಬಿಟ್ಟಿರುತ್ತಾನೆ. ಬೆಳಗಿನ ಜಾವ ಮರ್ನಾಲ್ಕು ಗಂಟೆಗೆ ಮಹಿಳಾ ಸಿಬ್ಬಂದಿ ಶಾಲೆಗೆ ಬರಬೇಕೆಂದು ಆಗ್ರಹಿಸುತ್ತಾನೆ ಎಂದು ಸಿಬ್ಬಂದಿಯೊಂದಿಗೆ ಗ್ರಾಮಸ್ಥರು ಮತ್ತು ಅಡುಗೆ ಸಿಬ್ಬಂದಿ ವಾಗ್ವಾದ ಮಾಡಿದ ವಿಡಿಯೋ ವೈರಲ್ ಆಗಿದೆ.



# ಶೀಘ್ರ ಬಿಜೆಪಿಗೆ ಹೊಸ ಸಾರಥಿ

**ನವದೆಹಲಿ,ಆ.27–** ಬಿಹಾರ ವಿಧಾನಸಭಾ ಚುನಾವಣೆ ಘೋಷಣೆಗೂ ಮುನ್ನವೇ ಬಿಜೆಪಿ ಹೊಸ ರಾಷ್ಟ್ರೀಯ ಅಧ್ಯಕ್ಷರನ್ನು ನೇಮಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ನೂತನ ರಾಷ್ಟ್ರೀಯ ಅಧ್ಯಕ್ಷರಾಗುವರ ಹೆಸರುಗಳ ಸಮಿತಿ ಸಿದ್ಧಪಡಿಸಿದ್ದು ಸೆಪ್ಟೆಂಬರ್ 9 ರಂದು ಉಪರಾಷ್ಟ್ರಪತಿ ಚುನಾವಣೆಯ ನಂತರ ಸಮಾಲೋಚನೆ ನಡೆಸಿ ನೂತನ ಅಧ್ಯಕ್ಷರನ್ನು ಆಯ್ಕೆ ಘೋಷಣೆ ಮಾಡುವ ಸಾಧ್ಯತೆ ಇದೆ ಎನ್ನಲಾಗಿದೆ.

ಕೇಂದ್ರ ಸಚಿವ ಜೆಪಿ ನಡ್ಡಾ ಅವರು ಪ್ರಸ್ತುತ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿದ್ದು, 2019 ರಲ್ಲಿ ಪಕ್ಷದ ಕಾರ್ಯಕಾರಿ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಜನವರಿ 2020 ರಿಂದ ಈ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಉತ್ತರಾಧಿಕಾರಿಯನ್ನು ಅಳೆದು ತೂಗಿ ಆಯ್ಕೆ ಮಾಡುವ ಸಾಧ್ಯತೆಗಳಿವೆ.

ರಾಷ್ಟ್ರೀಯ ಅಧ್ಯಕ್ಷರನ್ನು ಅಂತಿಮಗೊಳಿಸುವ ಮೊದಲು, ಉತ್ತರ ಪ್ರದೇಶ, ಗುಜರಾತ್ ಮತ್ತು ಕರ್ನಾಟಕದಂತಹ ಪ್ರಮುಖ ರಾಜ್ಯಗಳಲ್ಲಿ ಹೊಸ ರಾಜ್ಯ ಅಧ್ಯಕ್ಷರನ್ನು ನೇಮಿಸುವ ಸಾಧ್ಯತೆಯಿದೆ.



ಪ್ರಧಾನಿ ನರೇಂದ್ರ ಮೋದಿ ಅವರು ಉತ್ತರ ಪ್ರದೇಶದಿಂದ ಬಿಜೆಪಿಯ ರಾಷ್ಟ್ರೀಯ ಮಂಡಳಿಯ ಸದಸ್ಯರಾಗಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಗುಜರಾತ್‌ನಿಂದ ಆಯ್ಕೆಯಾಗಿದ್ದಾರೆ. ನಂತರ ಇಬ್ಬರೂ ನಾಯಕರು ಹೊಸ ಅಧ್ಯಕ್ಷರ ನಾಮನಿರ್ದೇಶನ ಪತ್ರಗಳಿಗೆ ಪ್ರಸ್ತಾಪಕರಾಗಿ ಕಾರ್ಯನಿರ್ವಹಿಸಲು ಅರ್ಹತೆ ಪಡೆದಿದ್ದಾರೆ.

ಜಾತಿ, ಪ್ರಾದೇಶಿಕ ಅಥವಾ ಸಾಮಾಜಿಕ ಸಮೀಕರಣಗಳಿಂದ ಆಯ್ಕೆಯಾಗುವುದನ್ನು ಪಕ್ಷದ ನಾಯಕತ್ವ ಬಯಸುವುದಿಲ್ಲ ಎಂದು ಮೂಲಗಳು ತಿಳಿಸಿವೆ.

ಬದಲಾಗಿ, ಹೊಸ ಅಧ್ಯಕ್ಷರು ಸಂಘಟನೆಯನ್ನು ಬಲಪಡಿಸುವತ್ತ ಗಮನಹರಿಸುವ ಸಾಮರ್ಥ್ಯವಿರುವ ವ್ಯಕ್ತಿಯಾಗಿರುತ್ತಾರೆ. ಈ ಹೆಸರು ಅಚ್ಚರಿ ಮೂಡಿಸುವ ಅಭ್ಯರ್ಥಿ ಆಯ್ಕೆ ಮಾಡುವ ಸಾಧ್ಯತೆ ಇದೆ ಎನ್ನಲಾಗಿದೆ.

ರಾಷ್ಟ್ರೀಯ ಮಟ್ಟದಲ್ಲಿ ಸಾಬೀತಾಗಿರುವ ಸಾಂಸ್ಥಿಕ ಅನುಭವ ಹೊಂದಿರುವ ಹಿರಿಯ ನಾಯಕನಿಗೆ ಜವಾಬ್ದಾರಿ ಸಿಗಲಿದೆ ಎಂದು ಹೇಳಲಾಗಿದೆ. ಆದಾಗ್ಯೂ, ಬಿಹಾರ ಚುನಾವಣೆ ಘೋಷಣೆಯಾಗುವ ಮೊದಲು ಆಯ್ಕೆ ನಡೆಯದಿದ್ದರೆ, **(2ನೇಪುಟಕ್ಕೆ)**

# ಜೆಡಿಎಸ್ ಪಕ್ಷದ ನೂತನ ಅಧ್ಯಕ್ಷರ ಆಯ್ಕೆ: ಪಕ್ಷ ಬಲವರ್ಧನೆಗೆ ಒತ್ತು

ಯುವ ಮಾರ್ಗ ಸುದ್ದಿ

**ಮಾನ್ವಿ,ಆ.27–** ಪಟ್ಟಣದ ಜೆಡಿಎಸ್ ಪಕ್ಷದ ಕಾರ್ಯಾಲಯದಲ್ಲಿ ಬುಧವಾರ ಮಾನ್ವಿ ತಾಲೂಕು ಜನತಾದಳ (ಜಾತ್ಯತೀತ) ಪಕ್ಷದ ವಿವಿಧ ಘಟಕಗಳ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ನಡೆಯಿತು.

ಪಕ್ಷ ಸಂಘಟನೆಯ ಬಲವರ್ಧನೆ ಹಾಗೂ ತಾಲೂಕು ಮತ್ತು ನಗರ ಮಟ್ಟದಲ್ಲಿ ಚಟುವಟಿಕೆಗಳನ್ನು ವೇಗಗೊಳಿಸುವ ಉದ್ದೇಶದಿಂದ ಪ್ರಮುಖ ಘಟಕಗಳಿಗೆ ಹೊಸ ಅಧ್ಯಕ್ಷರನ್ನು ನೇಮಿಸಲಾಯಿತು.

ತಾಲೂಕು ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರನ್ನಾಗಿ ಎಂ.ಡಿ.ಭಾಷಾ ಸಾಬ್, ತಾಲೂಕು ರೈತ ಘಟಕದ ಅಧ್ಯಕ್ಷರನ್ನಾಗಿ ಶರಣಪ್ಪಪ ಗೌಡ ಮದ್ಲಾಪೂರ, ನಗರ ಘಟಕದ ಅಧ್ಯಕ್ಷರನ್ನಾಗಿ ಹೆಚ್.ಮೌನೇಶ್ ಗೌಡ ಹಾಗೂ ನಗರ ಯುವ ಘಟಕದ ಅಧ್ಯಕ್ಷರನ್ನಾಗಿ ಎಂ.ಡಿ.ಉಸ್ಮಾನ್ ನೇಮಕಗೊಂಡಿದ್ದಾರೆ.

ಈ ನೇಮಕಾತಿಗಳು ಮಾಜಿ ಶಾಸಕರಾದ ರಾಜಾ ವೆಂಕಟಪ್ಪ ನಾಯಕ ದೊರೆರವರ ಶಿಫಾರಸ್ಸಿನ ಮೇರೆಗೆ ಕೂಡಲೇ ಜಾರಿಗೊಂಡಿದ್ದು, ಪಕ್ಷದ ತತ್ವ–ಸಿದ್ಧಾಂತಗಳಿಗೆ ಬದ್ಧರಾಗಿ, ಮಾನ್ವಿ ತಾಲೂಕಿನಲ್ಲಿ ಜೆಡಿಎಸ್ ಪಕ್ಷವನ್ನು ಸಂಘಟಿಸುವ ನಿಟ್ಟಿನಲ್ಲಿ ನೂತನ ಅಧ್ಯಕ್ಷರು ಕಾರ್ಯನಿರ್ವಹಿಸಲಿದ್ದಾರೆ ಎಂದು ತಾಲೂಕು ಅಧ್ಯಕ್ಷ ಈರಣ್ಣ ಮರ್ಲಟ್ಟಿ ಪೋತ್ನಾಳ ಆದೇಶ ಹೊರಡಿಸಿದ್ದಾರೆ.ಈ ಹಿನ್ನೆಲೆಯಲ್ಲಿ ಪಕ್ಷದ ನೂತನ ಅಧ್ಯಕ್ಷರಿಗೆ ತಾಲೂಕು ಜೆಡಿಎಸ್ ಹಿತೈಷಿಗಳು, ಕಾರ್ಯಕರ್ತರು ಅಭಿನಂದನೆ ಸಲ್ಲಿಸಿದರು.



# ಸುಜಾತ ಭಟ್ ವಿಚಾರಣೆಗೆ ಹಾಜರು

**ಮಂಗಳೂರು,ಆ.27–** ಅನನ್ಯಾ ಭಟ್ ನಾಪತ್ತೆ ಪ್ರಕರಣದ ಸೃಷ್ಟಿಕರ್ತೆ ಸುಜಾತ ಭಟ್ ವಿಶೇಷ ತನಿಖಾ ತಂಡದ (ಎಸ್ಐಟಿ) ಕಚೇರಿಗೆ ಆಗಮಿಸಿ ಅಧಿಕಾರಿಗಳಿಗೆ ಶಾಕ್ ನೀಡಿದ್ದಾರೆ.

ಅನನ್ಯಾ ಭಟ್ ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ಪೊಲೀಸರು ಆ.29 ರಂದು ವಿಚಾರಣೆಗೆ ಹಾಜರಾಗುವಂತೆ ಸುಜಾತ ಭಟ್‌ಗೆ ನೋಟಿಸ್ ನೀಡಿದ್ದರು.

ಕಳೆದ ಮೂರು ದಿನಗಳ ಹಿಂದೆ ವಿಚಾರಣೆ ನಿಗದಿಯಾಗಿದ್ದರೂ ಇಂದು ಬೆಳಗ್ಗೆ 5 ಗಂಟೆಗೆ ಬೆಳ್ತಂಗಡಿಯಲ್ಲಿರುವ ಎಸ್‌ಐಟಿ ಕಚೇರಿಗೆ ಇಬ್ಬರು ವಕೀಲರ ಜೊತೆ ಆಗಮಿಸಿದ್ದಾರೆ. ಸುಜಾತ ಭಟ್ ಬರುವಾಗ ಅಧಿಕಾರಿಗಳು ನಿದ್ದೆಯಲ್ಲಿದ್ದರು. ಕಚೇರಿಗೆ ಬಂದ ನಂತರ ಪೊಲೀಸರು ಸುಜಾತ ಭಟ್ ಅವರನ್ನು ಒಳಗಡೆ ಬರುವಂತೆ ಹೇಳಿದ್ದಾರೆ ಸುಜಾತ ಭಟ್ ಎಸ್‌ಐಟಿ ಕಚೇರಿಯ ಒಳಗಿದ್ದು,ವಿಚಾರಣೆ ಕೈಗೊಂಡಿದ್ದಾರೆ.

ಮಣಿಪಾಲದಲ್ಲಿ ಎಂಬಿಬಿಎಸ್ ಓದುತ್ತಿದ್ದ ಪುತ್ರಿ ಅನನ್ಯಾ ಭಟ್ ಧರ್ಮಸ್ಥಳಕ್ಕೆ ಬಂದಾಗ ನಾಪತ್ತೆಯಾಗಿದ್ದಾಳೆ. ಈ ಬಗ್ಗೆ ಠಾಣೆಗೆ ಹೋದಾಗ ಯಾರೂ**(2ನೇಪುಟಕ್ಕೆ)**



# ರಾಯಚೂರು ಜಿಲ್ಲೆಯಲ್ಲಿ ಉಪ ಲೋಕಾಯುಕ್ತರ ಪ್ರವಾಸ: ಸುವ್ಯವಸ್ಥಿತ ಪ್ರಚಾರಕ್ಕೆ ವ್ಯವಸ್ಥೆ




ಯುವ ಮಾರ್ಗ ಸುದ್ದಿ

**ರಾಯಚೂರು,ಆ.27–** ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಆಗಸ್ಟ್ 28 ರಿಂದ ಆಗಸ್ಟ್ 30ರವರೆಗೆ ರಾಯಚೂರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡ ಹಿನ್ನೆಲೆಯಲ್ಲಿ ಜಿಲ್ಲಾಡಳಿತವು ಮಹಾನಗರ ಪಾಲಿಕೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಪ್ರಚಾರ ಕಾರ್ಯವನ್ನು ಅಚ್ಚುಕಟ್ಟಾಗಿ ನಡೆಸುತ್ತಿದೆ.

ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಆಗಸ್ಟ್ 28 ರಿಂದ 30ರವರೆಗೆ ಸಾರ್ವಜನಿಕ ಅಹವಾಲು, ಕುಂದುಕೊರತೆ, ದೂರು ವಿಚಾರಣೆ ಹಾಗೂ ಬಾಕಿ ಇರುವ ಪ್ರಕರಣಗಳ ವಿಲೇವಾರಿ ಕಾರ್ಯಕ್ರಮಕ್ಕೆ ಸರ್ವರಿಗೂ ಸ್ವಾಗತ ಎನ್ನುವ ಬ್ಯಾನರ್‌ನ್ನು ರಾಯಚೂರ ಸಿಟಿ ಸೇರಿದಂತೆ ಜಿಲ್ಲೆಯಾದ್ಯಂತ ವಿವಿಧ ಜನನಿಬಿಡ ಸ್ಥಳಗಳಲ್ಲಿ ಅವಳಡಿಸಿ ವ್ಯಾಪಕ ಪ್ರಚಾರ ನಡೆಸಲಾಗುತ್ತಿದೆ.

ಕಾರ್ಯಕ್ರಮ ನಡೆಯುವ ಸ್ಥಳವಾದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ, ಜಿಲ್ಲಾ ಮಹಾತ್ಮಗಾಂಧೀ ಜಿಲ್ಲಾ ಕ್ರೀಡಾಂಗಣ, ಎಪಿಎಂಸಿ ಕಚೇರಿ, ಬಸವನಬಾವಿ ಸರ್ಕಲ್, ಕೆಕೆಆರ್‌ಟಿಸಿ ಡಿಪೊ, ತೀನ್ ಕಂದಿಲ್, ಆರ್‌ಟಿಓ ಕಚೇರಿ, ಯಕ್ಲಾಸಪುರದ ಜಿಲ್ಲಾಡಳಿತ ಭವನ, ಹೈದ್ರಾಬಾದ್ ರೋಡನ ಜಿಲ್ಲಾಸ್ಪತ್ರೆ, ಹಳೆಯ ಡಿಸಿ ಆಫೀಸ್ ಸೇರಿದಂತೆ ಇನ್ನೂ ಅನೇಕ ಕಡೆಗಳಲ್ಲಿ ಬೃಹಧಾಕಾರದ ಬ್ಯಾನರ್ ಅಳವಡಿಸಿ ಉಪ ಲೋಕಾಯುಕ್ತರ ಕಾರ್ಯಕ್ರಮಕ್ಕೆ ಪ್ರಚಾರ ನಡೆಸಲಾಗುತ್ತಿದೆ.

ಸಾರ್ವಜನಿಕ ಅಹವಾಲು, ಕುಂದುಕೊರತೆ, ದೂರು ವಿಚಾರಣೆ ಹಾಗೂ ಬಾಕಿ ಇರುವ ಪ್ರಕರಣಗಳ ವಿಲೇವಾರಿ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಭಾಗಿಯಾಗಲು ಅನುಕೂಲವಾಗುವಂತೆ ರಾಯಚೂರು ಸಿಟಿಯ ಆಯಾ ಕಚೇರಿಗಳ ಮುಂದಗಡೆಯು ಸಹ ಬ್ಯಾನರ್ ಅಳವಡಿಸಿ ಪ್ರಚಾರ ನಡೆಸಲಾಗುತ್ತಿದೆ.

**ಧ್ವನಿವರ್ಧಕ ಮೂಲಕ ಪ್ರಚಾರ:** ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ರಾಯಚೂರಿಗೆ ಆಗಮಿಸಿ ಸಾರ್ವಜನಿಕ ಅಹವಾಲು ಸ್ವೀಕಾರ ನಡೆಸಲಿದ್ದಾರೆ ಎನ್ನುವ ಸಂದೇಶವನ್ನು ಜನತೆಗೆ ರವಾನಿಸಲು ಧ್ವನಿವರ್ಧಕ ಬಳಸಿ ಮಹಾನಗರ ಪಾಲಿಕೆಯ ಕಸವಿಲೇವಾರಿ ವಾಹನಗಳಿಂದಲು ಸಹ ಪ್ರಚಾರ ನಡೆಸಲಾಗಿದೆ.

ಪ್ರಚಾರ ಸಮಿತಿಯಲ್ಲಿನ ಜಿಲ್ಲಾ ಪಂಚಾಯತ್ ಸಿಇಓ ಅವರು, ಮಹಾನಗರ ಪಾಲಿಕೆಯ ಆಯುಕ್ತರು, ವಾರ್ತಾ ಇಲಾಖೆಯ ಅಧಿಕಾರಿಗಳು, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಈ ಪ್ರಚಾರ ಕಾರ್ಯದ ಉಸ್ತುವಾರಿ ವಹಿಸಿರುತ್ತಾರೆ.

# ಪಾಲಿಕೆಯಿಂದ ಎಲ್‌ಇಡಿ ಬೀದಿದೀಪ ಅಳವಡಿಕೆ ಕಾರ್ಯಕ್ರಮಕ್ಕೆ ಸಚಿವರು, ಮಹಾಪೌರರಿಂದ ಚಾಲನೆ



ಯುವ ಮಾರ್ಗ ಸುದ್ದಿ

**ರಾಯಚೂರು,ಆ.27–** ರಾಯಚೂರು ಮಹಾನಗರ ಪಾಲಿಕೆಯಿಂದ ಎಲ್‌ಇಡಿ ಬೀದಿದೀಪಗಳನ್ನು ಅಳವಡಿಸುವ ಕಾರ್ಯಕ್ರಮಕ್ಕೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಹಾಗೂ ರಾಯಚೂರು ಮಹಾನಗರ ಪಾಲಿಕೆಯ ಮಹಾಪೌರರಾದ ನರಸಮ್ಮ ನರಸಿಂಹಲು ಮಾಡಿಗಿರಿ ಅವರು ಜಂಟಿಯಾಗಿ ಚಾಲನೆ ನೀಡಿದರು.

ಬುಧವಾರ ನಗರದ ಹಳೆಯ ನಗರ ಸಭೆ ಆವರಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಪಾಲಿಕೆಯ ಎಲ್ಲ ಸದಸ್ಯರು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದರು. ಬೀದಿ ದೀಪ ಅಳವಡಿಕೆಗೆ ತಂದಿದ್ದ ಬಾಕ್ಸಗಳನ್ನು ತೆರೆದು, ಕಾರ್ಯಕ್ರಮಕ್ಕೆ ಚಾಲನೆ ನೀಡುತ್ತಿದ್ದಂತೆ ಎಲ್ಲರೂ ಚಪ್ಪಾಳೆ ತಟ್ಟಿ ಹರ್ಷ ವ್ಯಕ್ತಪಡಿಸಿದರು.

ಈ ವೇಳೆ ಸಚಿವರು ಮಾತನಾಡಿ, ರಾಯಚೂರಿನ ಮುಖ್ಯ ರಸ್ತೆಗಳಲ್ಲಿ ಪಾಲಿಕೆಯಿಂದ ಗುಣಮಟ್ಟದ ಲೈಟಿಂಗ್ ವ್ಯವಸ್ಥೆ ಮಾಡುತ್ತಿದ್ದು, ಇದು ನಗರದ ಸೌಂದರ್ಯ ಹೆಚ್ಚಲು ಸಹಕಾರಿಯಾಗಿದೆ ಎಂದು ತಿಳಿಸಿದರು.

ರಾಯಚೂರು ಮಹಾನಗರ ಪಾಲಿಕೆಯಿಂದ 150 ವೋಲ್ಟೇಜ್‌ನ 605 ಎಲ್ಇಡಿ ಲೈಟ್ ಗಳಿಗೆ ಸುಮಾರು 80–90 ಲಕ್ಷ ರೂಪಾಯಿಗಳನ್ನು ಖರ್ಚು ಮಾಡಿ ಲೈಟಿಂಗ್ ವ್ಯವಸ್ಥೆ ಮಾಡಲಾಗುತ್ತಿದೆ. ಇದಕ್ಕಾಗಿ ಒಂದು ಸಮಿತಿ ರಚಿಸಿ ಉತ್ತಮ ನಿರ್ವಹಣೆಗೆ ಜವಾಬ್ದಾರಿ ನೀಡಬೇಕು ಎಂದು ಸಚಿವರು ತಿಳಿಸಿದರು. ಪಾಲಿಕೆಯ ವ್ಯಾಪ್ತಿಯಲ್ಲಿ ಲೈಟಿಂಗ್ ಸಮಸ್ಯೆ ಇರುವ ಕಡೆಗಳಲ್ಲಿ ಇನ್ಮೇಲೆ ಈ ಲೈಟ್ ವ್ಯವಸ್ಥೆಯಾಗಿ ಜನತೆಗೆ ಅನುಕೂಲವಾಗಲಿದೆ. ಪಾಲಿಕೆಯು ಜನತೆಗೆ ಸ್ಪಂದಿಸುವ ಉತ್ತಮ ಕಾರ್ಯ ಮಾಡಿದೆ ಎಂದು ತಿಳಿಸಿದರು.

ಅಸ್ಕಿಹಾಳನಿಂದ ರಿಂಗ್ ರೋಡವರೆಗೂ ರಸ್ತೆ ಹದಗೆಟ್ಟಿದ್ದು, ಪಾಲಿಕೆ ಹಾಗೂ ಕೆಕೆಆರ್‌ಡಿಬಿಯಿಂದ ಸರಿಪಡಿಸಲು ಯೋಜಿಸಬೇಕು ಎಂದು ಸಚಿವರು ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿ ಸದಸ್ಯರಾದ ಜಯಣ್ಣ, ಜಿಂದಪ್ಪ, ಶಶಿಧರ್, ಸಣ್ಣ ನರಸರೆಡ್ಡಿ, ಬಸವರಾಜ ಪಾಟೀಲ್, ತಿಮ್ಮಪ್ಪ ಮುಖಂಡರಾದ ನರಸಿಂಹಲು ಮಾಡಗಿರಿ, ಕೆ.ಶಾಂತಪ್ಪ, ಶಿವಮೂರ್ತಿ, ಶಾಲಂ ಪಾಷ, ಅಲಿಬಾಬು ಸೇರಿದಂತೆ ಸಿಬ್ಬಂದಿ ವರ್ಗದವರು ಇದ್ದರು.

## ಮೊದಲನೇಯ ಪುಟದಿಂದ

# ಶೀಘ್ರ ಬಿಜೆಪಿಗೆ ಹೊಸ ಸಾರಥಿ

ನೇಮಕಾತಿಯನ್ನು ಮುಂದೂಡಲಾಗುವುದು ಮತ್ತು ಚುನಾವಣೆಯ ನಂತರವೇ ಕೈಗೊಳ್ಳಲಾಗುವುದು ಎಂದು ತಿಳಿಸಿವೆ.

ಕರ್ನಾಟಕ ಸೇರಿ 3 ರಾಜ್ಯಕ್ಕೂ ಶೀಘ್ರ ಅಧ್ಯಕ್ಷರ ನೇಮಕ

ರಾಷ್ಟ್ರೀಯ ಅಧ್ಯಕ್ಷರನ್ನು ಅಂತಿಮಗೊಳಿಸುವ ಮೊದಲು, ಉತ್ತರ ಪ್ರದೇಶ, ಗುಜರಾತ್ ಮತ್ತು ಕರ್ನಾಟಕದಂತಹ ಪ್ರಮುಖ ರಾಜ್ಯಗಳಲ್ಲಿ ಹೊಸ ರಾಜ್ಯ ಅಧ್ಯಕ್ಷರನ್ನು ನೇಮಿಸುವ ಸಾಧ್ಯತೆಯಿದೆ.

ರಾಜ್ಯದಲ್ಲಿ ಹಾಲಿ ಅಧ್ಯಕ್ಷರಾಗಿರುವ ಬಿವೈ ವಿಜಯೇಂದ್ರ ಅವರಿಗೆ ಮತ್ತೊಮ್ಮೆ ಅವಕಾಶ ನೀಡುತ್ತಾರಾ ಅಥವಾ ಬೇರೆಯವರಿಗೆ ಅವಕಾಶ ನೀಡಲಾಗುತ್ತದೆಯೇ ಎನ್ನುವುದು ಕುತೂಹಲ ಕೆರಳಿಸಿದೆ.

# ಸುಜಾತ ಭಟ್ ವಿಚಾರಣೆಗೆ ಹಾಜರು

ನನ್ನ ದೂರನ್ನು ತೆಗೆದುಕೊಂಡಿಲ್ಲ. ಪ್ರಶ್ನೆ ಮಾಡಿದರೆ ನನಗೆ ಧರ್ಮಸ್ಥಳದಲ್ಲಿ ಹೊಡೆಯಲಾಗಿತ್ತು. ಉತ್ಖನನದ ವೇಳೆ ನನ್ನ ಮಗಳ ಮೂಳೆ ಸಿಕ್ಕಿದರೆ ನಾನು ಸನಾತನ ಹಿಂದೂ ಧರ್ಮದ ಪ್ರಕಾರ ಅಂತ್ಯಸಂಸ್ಕಾರ ಮಾಡುತ್ತೇನೆ ಎಂದು ಸುಜಾತ ಭಟ್ ಹೇಳಿದ್ದರು.

ನಂತರದ ದಿನಗಳಲ್ಲಿ ಒಂದೊಂದು ಮಾಧ್ಯಮಗಳಲ್ಲಿ ಬೇರೆ ಬೇರೆ ರೀತಿಯ ಹೇಳಿಕೆ ನೀಡುತ್ತಿದ್ದ ಕಾರಣ ಅನನ್ಯಾ ಭಟ್ ಪ್ರಕರಣ ನಕಲಿ ಎನ್ನುವುದು ಸಾಬೀತಾಗಿತ್ತು. ಕೊನೆಗೆ ಸುಜಾತ ಭಟ್ ನಾನು ಹೇಳುತ್ತಿರುವುದು ಸುಳ್ಳು ಎಂದು ಅಧಿಕೃತವಾಗಿ ತಿಳಿಸಿ ಈ ನಾಪತ್ತೆ ಪ್ರಕರಣಕ್ಕೆ ಅಂತ್ಯ ಹಾಡಿದ್ದರು.

ಸುಜಾತ ಭಟ್ ಅಂತ್ಯ ಹಾಡಿದ್ದರೂ ಸಾಮಾಜಿಕ ಜಾಲತಾಣದಲ್ಲಿ ಸಮೀರ್ ಅನನ್ಯಾ ಭಟ್‌ಗೆ ಸಂಬಂಧಿಸಿದಂತೆ ಎಐ ವಿಡಿಯೋ ರಚಿಸಿ ಬುರುಡೆ ಬಿಟ್ಟಿದ್ದ. ಈ ವಿಡಿಯೋ ಲಕ್ಷಗಟ್ಟಲ್ಲೇ ವ್ಯೂ ಪಡೆದುಕೊಂಡಿತ್ತು ಮತ್ತು ಪ್ರಕರಣಕ್ಕೆ ದೊಡ್ಡ ತಿರುವು ನೀಡಿತ್ತು. ಆದರೆ ಸುಳ್ಳು ಕಥೆ ಕಟ್ಟಿ ದೇವಸ್ಥಾನದ ವಿರುದ್ಧ ಷಡ್ಯಂತ್ರ ನಡೆಸಿದ್ದಕ್ಕೆ ಸುಜಾತ ಭಟ್ ವಿರುದ್ಧ ಕೇಸ್ ದಾಖಲಿಸುವಂತೆ ಭಾರೀ ಒತ್ತಡ ಕೇಳಿ ಬಂದಿತ್ತು. ಈ ಹಿನ್ನೆಲೆಯಲ್ಲಿ ಪೊಲೀಸರು ಸುಜಾತ ಭಟ್ ಅವರನ್ನು ವಿಚಾರಣೆಗೆ ಬರುವಂತೆ ಸೂಚಿಸಿದ್ದರು.

## ನಶಾ ಮುಕ್ತ ಭಾರತ ಅಭಿಯಾನ: ಬಂಡೀಪುರದಿಂದ ಬೀದರ್‌ವರೆಗೆ ಆಗಸ್ಟ್ 29 ರಿಂದ 3 ದಿನಗಳ ಬೈಕ್ ಜಾಥಾ

**ರಾಯಚೂರು,ಆ.27–**ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯವು ಆಚರಿಸುತ್ತಿರುವ ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ, 2025ರ ಆಗಸ್ಟ್ 29 ರಿಂದ 31ರವರೆಗೆ ಬಂಡೀಪುರದಿಂದ ಬೀದರವರೆಗೆ 3 ದಿನಗಳ ಬೈಕ್ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಮದ್ಯಪಾನ ಮತ್ತು ಮಾದಕ ವಸ್ತುಗಳ ದುರುಪಯೋಗದ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಮಾದಕ ವಸ್ತು ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರೇರಣೆ ನೀಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ರಾಜ್ಯ ಸರ್ಕಾರದ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನರಾಜ್‌ಸಿಂಗ್ ಅವರು ತಿಳಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಅರಣ್ಯ ಇಲಾಖೆ, ರಾಷ್ಟ್ರೀಯ ಸೇವಾ ಯೋಜನೆ (ಎನ್.ಎಸ್.ಎಸ್.) ಮತ್ತು ಎನ್.ಸಿ.ಸಿ. ಸಹಯೋಗದೊಂದಿಗೆ ಜಾಥಾ ಆಯೋಜಿಸಲಾಗುತ್ತಿದೆ. ಸಾರ್ವಜನಿಕರಿಂದ ಆಯ್ಕೆಯಾದ 20 ಬೈಕ್ ಸವಾರರು ಭಾಗವಹಿಸಲಿದ್ದಾರೆ. ಈ ಜಾಥಾ ಕಾರ್ಯಕ್ರಮವು ಮಾರ್ಗದುದ್ದಕ್ಕೂ ರಾಜ್ಯದ ಪ್ರಮುಖ ಜಿಲ್ಲೆಗಳ ಮೂಲಕ ಸಾಗುತ್ತಾ ಶಾಲೆಗಳು, ಕಾಲೇಜುಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಿದೆ.

ಈ ಬೃಹತ್ ಅಭಿಯಾನವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನರಾಜ್ ಸಿಂಗ್, ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿ (ಅರಣ್ಯ) ಮನೋಜಕುಮಾರ್, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅಭಿವೃದ್ಧಿ) ಆರ್.ರವಿಶಂಕರ್, ಬಂಡೀಪುರ ಹುಲಿ ಮೀಸಲು ಪ್ರದೇಶದ ಉಪ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ನಿರ್ದೇಶಕ ಎಸ್.ಪ್ರಭಾಕರನ್, ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ಹಾಗೂ ಇತರ ಸರ್ಕಾರದ ಹಿರಿಯ ಅಧಿಕಾರಿಗಳು ಮತ್ತು ಗಣ್ಯರು ರೂಪಿಸಿದ್ದಾರೆ.

ದೇಶಾದ್ಯಂತ 1 ಲಕ್ಷ ಕಿಲೋಮೀಟರುಗಳಿಗೂ ಹೆಚ್ಚು ಪ್ರಯಾಣವನ್ನು ಸೈಕ್ಲಿಂಗ್‌ನಲ್ಲಿ ಕ್ರಮಿಸಿ ಅಪ್ರತಿಮ ಸಾಧನೆ ಮಾಡಿರುವ ರೈಡರ್ ನಂದಿನಿ ಮಿಥುನ್ ಈ ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಲಿರುವುದು ವಿಶೇಷವಾಗಿದೆ. ಅವರು ತಮ್ಮ ಅಸಾಧಾರಣ ಅನುಭವಗಳು ಮತ್ತು ಬದ್ಧತೆಯಿಂದ ಸಾಮಾಜಿಕ ಉದ್ದೇಶಗಳ ಕಡೆಗೆ ಯುವಕರನ್ನು ಪ್ರೇರೇಪಿಸಲಿದ್ದಾರೆ. ಈ ಗಣ್ಯರು, ಶಾಲಾ–ಕಾಲೇಜುಗಳು ಮತ್ತು ಸಾರ್ವಜನಿಕ ವೇದಿಕೆಗಳಲ್ಲಿ ಭಾಗವಹಿಸಿ ಯುವಜನತೆಗೆ ಉದ್ದೇಶಿತ ಜಾಗೃತಿ ಭಾಷಣಗಳು ಮತ್ತು ಸಂದೇಶಗಳನ್ನು ನೀಡಲಿದ್ದಾರೆ. ಸಾರ್ವಜನಿಕರಿಗೆ ಮಾದಕ ದ್ರವ್ಯ ಮುಕ್ತ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣದ ಪ್ರಯತ್ನವಾಗಿ ಕರ್ನಾಟಕ ರಾಜ್ಯ ಸರ್ಕಾರವು ಜಾಥಾ ಹಮ್ಮಿಕೊಂಡಿದೆ.

## ಔರಾದನಲ್ಲಿ ಬಿಜೆಪಿಯಿಂದ ಬೃಹತ್ ಪ್ರತಿಭಟನೆ ದರ್ಮಸ್ಥಳ ಪ್ರಕರಣ ಎನ್‌ಐಎಗೆ ವಹಿಸಲು ಆಗ್ರಹ

**ಔರಾದ್,ಅ.27–**ಪುಣ್ಯಭೂಮಿ ರ್ಮಸ್ಥಳದ ಪಾವಿತ್ರ್ಯತ್ರ್ಯಕ್ಕೆ ಕಳಂಕ ತರಲು ನಡೆಯುತ್ತಿರುವ ಷಡ್ಯಂತ್ರವನ್ನು ವಿರೋಧಿಸಿ ಬಿಜೆಪಿ ಮಂಡಲ ಘಟಕದ ವತಿಯಿಂದ ಸೋಮವಾರ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ಪಟ್ಟಣದ ಎಪಿಎಂಸಿ ವೃತ್ತದ ಬಳಿ ಪ್ರತಿಭಟನೆಗೆ ಶಾಸಕ ಪ್ರಭು ಚವ್ಹಾಣ ಚಾಲನೆ ನೀಡಿದರು. ಪ್ರಮುಖ ಮರ್ಗಗಳ ಮೂಲಕ ಪ್ರತಿಭಟನಾ ಬಸವೇಶ್ವರ ವೃತ್ತಕ್ಕೆ ಬಂದು ಕೊನೆಗೊಂಡಿತು. ಪಕ್ಷದ ಕರ್ಯರ್ತರು, ಮುಖಂಡರು, ಸಂಘ ಸಂಸ್ಥೆಗಳ ಪ್ರಮುಖರು ಮಾನವ ಸರಪಳಿಯನ್ನು ನರ್ಮಿಸಿ ಆಕ್ರೋಶ ವ್ಯಕ್ತಪಡಿಸಿದರು. ಹಿಂದುಗಳ ಭಾವನೆಗೆ ಧಕ್ಕೆ ತರುವ ಷಡ್ಯಂತ್ರ ರೂಪಿಸಿದ ಸಮಾಜ ವಿರೋಧಿ, ದೇಶ ವಿರೋಧಿಗಳ ಜಾಲದ ಪತ್ತೆಗಾಗಿ ಪ್ರಕರಣದ ತನಿಖೆಯನ್ನು ರಾಷ್ಟ್ರೀಯ ತನಿಖಾ ದಳಕ್ಕೆ ವಹಿಸಬೇಕೆಂದು ತಹಸೀಲ್ದಾರರ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ'ರ್ಮಕ್ಕೆ ಜಯವಾಗಲಿ, ದುಷ್ಟರ ಸಂಹಾರವಾಗಲಿ, 'ರ್ಮಸ್ಥಳ ಕ್ಷೇತ್ರದ ವಿರುದ್ಧ ಅಪಪ್ರಚಾರ ಮಾಡುವವರ ಬಂಧನ ಯಾವಾಗ ?', 'ಹಿಂದುಗಳ ಕೆಣಕಿದರೆ ಸಮರ ಎಡಪಂಥೀಯರೆ ಎಚ್ಚರ' ಎನ್ನುವ ಫಲಕಗಳನ್ನು ಹಿಡಿದು ಜಯಘೋಷಗಳನ್ನು ಮೊಳಗಿಸಲಾಯಿತು.

ಈ ಸಂರ್ಭದಲ್ಲಿ ಮುಖಂಡರು ಮಾತನಾಡಿ, ರ್ಮಸ್ಥಳ ಕ್ಷೇತ್ರವು ರ್ನಾಟಕ ಮಾತ್ರವಲ್ಲ, ಇಡೀ ವಿಶ್ವದ ಸಮಸ್ತ ಹಿಂದುಗಳ ಶ್ರದ್ಧೆ, ಭಕ್ತಿ, ನಂಬಿಕೆಯುಳ್ಳ ಪವಿತ್ರ ಧರ್ಮಿಕ ಕೇಂದ್ರವಾಗಿದೆ. ಹಿಂದು ರ್ಮದ ಪುನರುತ್ಥಾನಕ್ಕಾಗಿ, ಮಾನವ ಉದ್ಧಾರಕ್ಕಾಗಿ ವಿಶಿಷ್ಟ ಸೇವೆ ಸಲ್ಲಿಸುತ್ತಿದೆ. ರ್ಮಾಧಿಕಾರಿ ಡಾ.ವೀರೇಂದ್ರ ಹೆಗ್ಗಡೆಯವರು ಜನಸೇವೆಯೇ ಜನರ್ಧನ ಸೇವೆ ಎಂದು ಜನಪರ, ಜೀವಪರವಾದ ಕೆಲಸಕರ್ಯಗಳು ಮಾಡುತ್ತಿದ್ದಾರೆ.

ಸಮಾಜದ, ದೇಶ ವಿರೋಧಿಗಳು ಬಹು ದೊಡ್ಡ ಷಡ್ಯಂತ್ರ ಹೆಣೆದು ರ್ಮಸ್ಥಳದ ಪಾವಿತ್ರ್ಯತ್ರ್ಯಕ್ಕೆ ಧಕ್ಕೆ ತರಲು ಪ್ರಯತ್ನಿಸುತ್ತಿದ್ದಾರೆ. ದೇಶ–ವಿದೇಶದ ಕೆಲ ಕಾಣದ ಕೈಗಳುಇದರ ಹಿಂದೆ ಕೆಲಸ ಮಾಡುತ್ತಿರುವುದು ಆಘಾತ ಮೂಡಿಸಿದೆ. ರಾಜ್ಯದಲ್ಲಿ ಕಾಂಗ್ರೆಸ್ ರ್ಕಾರ ಅಧಿಕಾರಕ್ಕೆ ಬಂದ ಮೇಲೆ ಹಿಂದುಗಳ ಭಾವನೆಗೆ ಧಕ್ಕೆ ತರುವ, ಹಿಂದು ಹೋರಾಟ ಹತ್ತಿಕ್ಕುವ ಕರ್ಯ ನಿರಂತರ ನಡೆದಿದೆ. ಹಿಂದುಗಳ ಹತ್ಯೆ, ಹಿಂದುಗಳ ಮೇಲೆ ದರ್ಜನ್ಯ, ದಬ್ಬಾಳಿಕೆ ಹೆಚ್ಚಾಗಿವೆ. ಸಮಾಜಘಾತುಕ ಶಕ್ತಿಗಳು ಸಕ್ರಿಯವಾಗಿವೆ. ಕಾನೂನು ಮತ್ತು ಸುವ್ಯವಸ್ಥೆ ಸಂಪರ್ಣ ಹಾಳಾಗಿದೆ. ಕರುನಾಡು ಕ್ರಿಮಿನಲ್




ನಾಡು ಎಂಬಂತಾಗಿದೆ ಎಂದು ಬೇಸರ ಹೊರಹಾಕಿದರು.

ರ್ಮಸ್ಥಳದಲ್ಲಿ ನೂರಾರು ಹೆಣಗಳು ಹೂತಿರುವ ಬಗ್ಗೆ ಯಾರೋ ಕೆಲವರು ಎಬ್ಬಿಸಿದ ಗೊಂದಲ, ಅನಾಮಿಕ ನೀಡಿದ ತಲೆಬುಡವಿಲ್ಲದ ದೂರಿನ ಮೇಲೆ ಅಸ್ಥಿಪಂಜರ ಶೋಧ ನೆಪದಲ್ಲಿ ರ್ಕಾರ ಯಾವುದೇ ಪರ್ವಾಪರ ವಿಚಾರ ಮಾಡದೆ, ಆತುರಾತುರದಲ್ಲಿ ತನಿಖೆಗೆ ಎಸ್‌ಐಟಿ ರಚನೆ ಮಾಡಿದ್ದೇ ಹಾಸ್ಯಾಸ್ಪದ. ತನಿಖೆ ಹೆಸರಿನಲ್ಲಿ ರ್ಕಾರ ಅನಗತ್ಯವಾಗಿ ರ್ಮಸ್ಥಳಕ್ಕೆ ಸರ್ವಜನಿಕವಾಗಿ ಕಳಂಕ ಹಚ್ಚುವ ಕೆಲಸ ಮಾಡಿದೆ. ರಾಜ್ಯದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ರ್ಮಸ್ಥಳದ ನೆಲದಿಂದಲೇ ರ್ನಾಟಕದ ಜನತೆಗೆ ಬಹಿರಂಗ ಕ್ಷಮೆ ಕೋರಬೇಕೆಂದು ಒತ್ತಾಯಿಸಿದರು.

ಅನಾಮಿಕ ಚನ್ನಯ್ಯ, ಸುಜಾತಾ ಭಟ್, ಯೂಟ್ಯೂಬರ್ ಮಹ್ಮದ್ ಸಮೀರ್ ಮುಂತಾದವರು ಇಲ್ಲಿ ಸೂತ್ರಧಾರಿಗಳಾಗಿದ್ದಾರೆ. ಇವರ ಹಿಂದಿರುವ ಪಾತ್ರಧಾರಿಗಳು ಯಾರು? ಇವರ ಬುಡ ಎಲ್ಲಿದೆ? ಇದರ ಹಿಂದೆ ಯಾರು ಯಾರು ಇದ್ದಾರೆ ಎಂಬುದು ಬಯಲಿಗೆ ತರುವ ಅಗತ್ಯವಿದೆ. ದೂರುದಾರ ಅನಾಮಿಕ ಚನ್ನಯ್ಯ ಬುರುಡೆ ಬಿಟ್ಟಿದ್ದು ಬಯಲಾಗಿದೆ. ಎಸ್‌ಐಟಿ ಈತನಿಗೆ ಬಂಧಿಸಿ ವಿಚಾರಣೆ ನಡೆಸುತ್ತಿದೆ. ಆದರೆ ಎಸ್ ಐಟಿಯಿಂದ ಇದರ ಹಿಂದಿನ ಜಾಡು ಪತ್ತೆ ಹಚ್ಚುವುದು ಅನುಮಾನಕ್ಕೆ ಕಾರಣವಾಗಿದೆ. ಏಕೆಂದರೆ ಹಿಂದು ವಿರೋಧಿ ಷಡ್ಯಂತ್ರ ಮಾಡುವವರ ವಿರುದ್ಧ ಕಾಂಗ್ರೆಸ್ ರ್ಕಾರ ಕಠಿಣ ಕ್ರಮ ಕೈಗೊಳ್ಳುವ ಭರವಸೆ ಯಾರಿಗೂ ಇಲ್ಲ. ಹೀಗಾಗಿ ಇದರ ಹಿಂದಿನ ಸಮಾಜ ವಿರೋಧಿ, ರ್ಮ ವಿರೋಧಿ, ದೇಶ ವಿರೋಧಿಗಳ ಪತ್ತೆಗಾಗಿ ಕೇಂದ್ರದ ತನಿಖಾ ದಳದಿಂದ ತನಿಖೆ ನಡೆಸುವುದು ಅತಿ ಅಗತ್ಯವಿದೆ ಎಂದು ಮನವಿ ಪತ್ರದಲ್ಲಿ ಆಗ್ರಹಿಸಿದರು.

# ಭಕ್ತಿಯಲ್ಲಿ ನಿಜವಾದ ಶಕ್ತಿ ಇದೆ : ಮಾಸಿಮಾಡೆ



**ಬೀದರ್, ಆ.27–**"ಭಕ್ತಿಯಿಂದ ನಮ್ಮೊಳಗಿನ ದರ್ಪ ಮಾಯವಾಗಿ ಶಕ್ತಿಯು ಹೆಚ್ಚುತ್ತದೆ. ಶರಣರ ಹಾಗೆ ನಡೆ–ನುಡಿಗಳನ್ನು ಒಂದಾಗಿಸಿ ಸರಳತೆಯಿಂದ ಬದುಕಿದಾಗ ಮಾತ್ರ ಸಮಾಜದಲ್ಲಿ ನೈತಿಕತೆ ಬೆಳೆಸಬಹುದು," ಎಂದು ಕರ್ನಾಟಕ ಸಾಹಿತ್ಯ ಪರಿಷತ್ತಿನ ನಿಕಟ ಪೂರ್ವಾಧ್ಯಕ್ಷರಾದ ಪ್ರೋ. ಸಿದ್ದರಾಮಪ್ಪ ಮಾಸಿಮಾಡೆ ಹೇಳಿದರು.

ಇವರು ಶ್ರೀ ದತ್ತಾತ್ರಮ ಚಾರಿಟಬಲ್ ಟ್ರಸ್ಟ್ ವತಿಯಿಂದ ರಾಂಪುರೆ ಕಾಲೋನಿಯ ಶ್ರೀ ದತ್ತಾಶ್ರಮ ಆವರಣದಲ್ಲಿ ಶ್ರಾವಣ ಮಾಸದ ಸಮಾಪ್ತಿಯ ನಿಮಿತ್ಯ ಏರ್ಪಡಿಸಿದ್ದ ಉಪನ್ಯಾಸ ಹಾಗೂ ಎಸ್‌ಎಸ್‌ಎಲ್‌ಸಿ ಉತ್ತಮ ಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

"ವಿದ್ಯಾರ್ಥಿಗಳಲ್ಲಿ ಸಂಸ್ಕಾರ ಬೆಳಗಬೇಕು, ಗುರುಹಿರಿಯರ ಗೌರವ ರೂಢಿಸಬೇಕು, ಅಷ್ಟೇ ಅಲ್ಲದೇ ಶಾಲೆ, ಕಾಲೇಜು, ವಿಶ್ವವಿದ್ಯಾಲಯಗಳಿಗೆ ಉತ್ತಮ ಹೆಸರು ಬರಲು ಉತ್ತಮ ವಿದ್ಯಾರ್ಥಿಗಳು ಕಾರಣರಾಗುತ್ತಾರೆ" ಎಂದು ಅವರು ಅಭಿಪ್ರಾ ಯಪಟ್ಟರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಕರ್ನಾಟಕ ಗಡಿಯ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವ ಕುಮಾರ ಅತಿವಾಳೆ ಮಾತನಾಡಿ, "ಇಂದು ಒಂದು ಕಡೆ ಸಮಾಜದಲ್ಲಿ ಪ್ರಗತಿ ಕಂಡರೂ ಇನ್ನೊಂದೆಡೆ ನೈತಿಕತೆ ಕುಸಿಯುತ್ತಿದೆ, ಶಾಂತಿ ಮರೆಯಾಗುತ್ತಿದೆ. ಶ್ರಾವಣ ಮಾಸದಲ್ಲಿ ಒಳ್ಳೆಯ ವಿಚಾರಗಳನ್ನು ಕ್ರಿಯಾರೂಪಕ್ಕೆ ತರಬೇಕಾಗಿದೆ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಿರಿಯ ಸಾಹಿತಿ ಡಾ. ಎಂ.ಜಿ. ದೇಶಪಾಂಡೆ ಅಧ್ಯಕ್ಷತೆ ವಹಿಸಿಕೊಂಡು ತಮ್ಮ ಅಭಿಪ್ರಾಯ ಹಂಚಿಕೊಂಡರು. ಕಿರಣ ಮಹಾರಾಜ್ ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಉತ್ತಮ ಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಾದ ಸಾಯಿನಾಥ್ ಶ್ರೀಪತಿ, ತೇಜಸ್ವಿನಿ ಪಾಂಡುರಂಗ, ಸೌಂದರ್ಯ ಕಂಟೆಪ್ಪ, ವೈಷ್ಣವಿ ಜಗನ್ನಾಥ, ಅಂಬಿಕಾ ಮಹಾದಪ್ಪ ಇವರಿಗೆ ಪ್ರಶಸ್ತಿಗಳು ಹಾಗೂ ನಗದು ಬಹುಮಾನಗಳನ್ನು ನೀಡಿ ಗೌರವಿಸಲಾಯಿತು.

ಕಲಾತ್ಮಕ ಕಾರ್ಯಕ್ರಮದ ಅಂಗವಾಗಿ ಕುಮಾರಿ ಆಸ್ತಾ ನೃತ್ಯ ಪ್ರದರ್ಶಿಸಿದರು. ಶ್ರೀಮತಿ ಮಂಜುಳಾ ಮಠಪತಿ, ಶಿಲ್ಪ ಪಾಟೀಲ್, ರೇಖಾ ವಗ್ದಾಳೆ ಭಾವಗೀತೆಗಳನ್ನು ಹಾಡಿದರು. ಕಾರ್ಯಕ್ರಮವನ್ನು ಬಸವರಾಜ್ ಮೂಲಗೆಯವರು ನಿರೂಪಿಸಿದರು.

ಕಾರ್ಯಕ್ರಮದಲ್ಲಿ ವೀರಭದ್ರಪ್ಪ ಉಪ್ಪಿನ್, ಬಾಬುರಾವ್ ಗೊಂಡ, ರಮೇಶ್ ಇಟ್ಟಿಗಿ, ಶರಣಪ್ಪ ಬೀರಕೂರ, ಶರಣಪ್ಪ ಕುಶನೂರು ಸೇರಿದಂತೆ ನೂರಾರು ಮಂದಿ ಮಹಿಳೆಯರು ಮತ್ತು ಮಕ್ಕಳು ಭಾಗವಹಿಸಿದ್ದರು. ಶ್ರೀಮತಿ ಅಂಕಿತಾ ಬಚ್ಚಣ್ಣ ವಂದನೆ ಸಲ್ಲಿಸಿದರು. ಕಾರ್ಯಕ್ರಮದ ಅಂತ್ಯದಲ್ಲಿ ಪ್ರಸಾದ ವಿತರಣೆ ನಡೆಯಿತು.

# ದಿಶಾ ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ಸದ್ಭಾವನಾ ದಿವಸ



**ಬೀದರ್, ಅ.27–**ಭಾರತ ಸರ್ಕಾರದ ಯುವ ಕಾರ್ಯ ಹಾಗೂ ಕ್ರೀಡಾ ಸಚಿವಾಲಯದ ಇಲಾಖೆಯಾದ ಮೇರಾ ಯುವ ಭಾರತ್ ಬೀದರ್ ಹಾಗೂ ಮಂಗಲಾ ಮಹಿಳಾ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಮಾಣಿಕ್ ಯುವ ಸಾಂಸ್ಕೃತಿಕ ಕಲಾ ಸಂಸ್ಥೆ ಇವುಗಳ ಸಂಯುಕ್ತಾಶ್ರಯದಲ್ಲಿ ಬುಧವಾರ ನಗರದ ಶಿವನಗರದಲ್ಲಿನ ದಿಶಾ ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಹುಟ್ಟು ಹಬ್ಬದ ನಿಮಿತ್ಯ ಸದ್ಭಾವನಾ ದಿವಸ ಕಾರ್ಯಕ್ರಮ ಆಚರಿಸಲಾಯಿತು.

ಜಿಲ್ಲಾ ಪಂಚಾಯತನ ಮಾಜಿ ಅಧ್ಯಕ್ಷೆ ಗೀತಾ ಪಂಡಿತರಾವ ಚಿದ್ರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ,

ರಾಜೀವ ಗಾಂಧಿ ಅವರ ಸಾಧನೆ ನಮಗೆ ಸ್ಫೂರ್ತಿ ಅವರ ಉದ್ದೇಶಗಳನ್ನು ನಾವು ತಿಳಿದುಕೊಂಡು ಅವರ ಮಾರ್ಗದಲ್ಲಿ ನಡೆಯಬೇಕೆಂದು ಕರೆ ನೀಡಿದರು.

ರಾಜೀವ ಗಾಂಧಿಯವರು ದೇಶದ ಅತ್ಯಂತ ಕಿರಿಯ ಪ್ರಧಾನಿಯಾಗಿದ್ದರು ಮತ್ತು ಆಡಳಿತಕ್ಕೆ ಅವರ ಮುಂದಾಲೋಚನೆ ಮತ್ತು ಆಧುನಿಕ ವಿಧಾನಕ್ಕೆ ಹೆಸರುವಾಸಿಯಾಗಿದ್ದರು. ಶಿಕ್ಷಣದಿಂದ ಸಮಾನತೆ ತರಲು ಅವರು ಬಯಸಿದ್ದರು. ವಿದ್ಯಾಭ್ಯಾಸ ಎಲ್ಲಕಿಂತ ಮುಖ್ಯವಾದದು ಒಳ್ಳೆಯ ವಿದ್ಯಾಭ್ಯಾಸ ಮಾಡಿ ಮುಂದೆ ಉನ್ನತ ಸ್ಥಾನಕ್ಕೆ ಬೆಳಿದು ನಿಲ್ಲಬೇಕಿದೆ ಎಂದರು.

ಮಂಗಲಾ ಮಹಿಳಾ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಸಂಸ್ಥೆಯ ಅಧ್ಯಕ್ಷೆ ಕು.ಮಂಗಲಾ ಮರಕಲೆ ಮಾತನಾಡಿ, ಆಧುನಿಕ ತಂತ್ರಜ್ಞಾನದ ಅಭಿವೃದ್ಧಿಯಲ್ಲಿ ರಾಜೀವ ಗಾಂದಿಯವರ ಕೊಡುಗೆ ಬಹಳಷ್ಟಿದೆ. ಇಂದು ಗಂಡು ಹಾಗೂ ಹೆಣ್ಣು ಸಮಾನವಾಗಿ ಬೆಳೆಯಲು ರಾಜೀವ ಗಾಂಧಿ ಹಾಕಿಕೊಟ್ಟ ಮಾಗಧ ಉಪಯುಕ್ತವಾಗಿದೆ. ಆದರೆ ಇತ್ತಿಚೀಗೆ ಯುವಜನತೆ ತಂತ್ರಜ್ಞಾನ ವನ್ನು ಕೆಟ್ಟ ಕಾರ್ಯಕ್ಕೆ ಬಳಿಸಿ ದೇಶದ ಘನತೆಗೆ ಕುಂದು ತರುತ್ತಿರುವುದು ಕಳವಳಕಾರಿ ಘಟನೆ ಎಂದರು.

ಇದೇ ಸಂದರ್ಭದಲ್ಲಿ ಸದ್ಭಾವನಾ ದಿವಸ ನಿಮಿತ್ಯ ನಿಶಾ ಪ್ಯಾರಾಮೆಡಿಕಲ್ ಕಾಲೇಜನಲ್ಲಿ ರಾಜೀವ ಗಾಂಧಿರವರ ಜೀವನ ಚರಿತ್ರೆ ಬಗ್ಗೆ ಪ್ರಭಂದ ಸ್ಪರ್ಧೆ ನಡೆಸಿ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ ರೇಷ್ಮಾ ನಾಗನಾಥ್, ದ್ವಿತೀಯ ಸ್ಥಾನ ಗಳಿಸಿದ ಶ್ರೀತ, ಸಾಕ್ಷಿ. ಮತ್ತು ತೃತೀಯ ಸ್ಥಾನ ಗಳಿಸಿದ ಲಕ್ಷ್ಮಿ, ಸೈಯದ್ ಅಬ್ದುಲ್ ರೊಯ್ ಅವರಿಗೆ ಪ್ರಮಾಣ ಪ್ರಮಾಣ ಪತ್ರ ಹಾಗೂ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಕಾಲೇಜಿನ ಸಿಬ್ಬಂಧಿಗಳಾದ ಅಶ್ವಿನಿ ರೆಡ್ಡಿ, ನವಿತಾ ಅನುಪರಾಜ್, ರಾಧಿಕಾ ಪ್ರವೀಣ್ ಕುಲಕರ್ಣಿ, ಅನುಪರಾಜ್, ವೀರಭದ್ರ ಮರ್ಜಾಪುರೆ, ಮತ್ತು ಭಾಗ್ಯಶ್ರೀ ಉಪಸ್ಥಿತರಿದ್ದರು.

## ದೋಣಿ ದುರಂತ; ಮೀನುಗಾರ ಮೃತ್ಯು

**ಕೋಟ,ಆ.27–**ಮೀನುಗಾರಿಕೆ ತೆರಳಿದ್ದ ವೇಳೆ ಸಮುದ್ರದ ಅಲೆಗಳ ರಭಸಕ್ಕೆ ದೋಣಿ ಮಗುಚಿ ಬಿದ್ದು ಅದರಲ್ಲಿದ್ದ ಓರ್ವ ಮೀನುಗಾರ ಮೃತಪಟ್ಟು, ಇಬ್ಬರು ಪ್ರಾಣಪಾಯದಿಂದ ಪಾರಾದ ಘಟನೆ ಸಾಸ್ತಾನದ ಕೋಡಿತಲೆ ಅಳಿವೆ ಬಳಿ ಶುಕ್ರವಾರ ಬೆಳಿಗ್ಗೆ ಸಂಭವಿಸಿದೆ.



ಮೃತಪಟ್ಟ ಮೀನುಗಾರ ಶರತ್ ಖಾರ್ವಿ (27) ಎಂದು ಗುರುತಿಸ ಲಾಗಿದೆ. ಶುಕ್ರವಾರ ಬೆಳಿಗ್ಗೆ ಶಂಕರ್ ಖಾರ್ವಿ ಮಾಲಕತ್ವದ ದೋಣಿಯಲ್ಲಿ ಅಕ್ಷಯ ಖಾರ್ವಿ, ಮಂಜುನಾಥ್ ಖಾರ್ವಿ ಹಾಗೂ ಶರತ್ ಖಾರ್ವಿ ಈ ಮೂವರು ಮೀನು ಗಾರರು ಮೀನುಗಾರಿಕೆ ತೆರಳಿದ್ದರು.ಸಮುದ್ರದ ಅಲೆಗಳ ರಭಸಕ್ಕೆ ದೋಣಿ ಮಗುಚಿ ಬಿದ್ದು ಮೂವರು ನೀರುಪಾಲಗಿದ್ದರು.

ಅದೃಷ್ಠವಷಾತ್ ಪ್ರಾಣಾಪಾಯದಿಂದ ಪಾರಾಗಿದ್ದ ಮಂಜುನಾಥ್ ಖಾರ್ವಿ, ಅಕ್ಷಯ್ ಖಾರ್ವಿ

ಇಬ್ಬರು ಮೀನುಗಾರರು ಉಡುಪಿ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ದೋಣಿ ಸಮುದ್ರ ಪಾಲಾಗಿದ್ದು ಲಕ್ಷಾಂತರ ರೂ.ನಷ್ಟ ಸಂಭವಿಸಿದೆ ಎನ್ನಲಾಗಿದೆ. ಕೋಟ ಪೊಲೀಸ್ ಠಾಣೆ ಯಲ್ಲಿ ಪ್ರಕರಣ ದಾಖಲಾಗಿದೆ.

# ಗೋಡಂಬಿಯ ಆರೋಗ್ಯ ಲಾಭಗಳು

ಗೋಡಂಬಿಯಲ್ಲಿ ಉನ್ನತಮಟ್ಟದ ಒಮೆಗಾ-3 ಅಲ್ಫಾ ಲಿನೊಲೆನಿಕ್ ಆಮ್ಲವಿದೆ ಮತ್ತು ಏಕಪರ್ಯಾಪ್ತ ಆಲಿರೀಕ್ ಆಮ್ಲವಿದೆ. ಇದನ್ನು ಹೊರತುಪಡಿಸಿ,ಇತರವಿವಿಧವಿಟಮಿನ್ ಗಳು ಹಾಗೂ ಖನಿಜಾಂಶಗಳು ಗೋಡಂಬಿಯಲ್ಲಿದೆ. ಹಲವಾರು ರೀತಿಯ ಪೋಷಕಾಂಶಗಳನ್ನು ಒಳಗೊಂಡಿರುವಗೋಡಂಬಿಯಲ್ಲಿರುವ ಉನ್ನತ ಮಟ್ಟದ ಕ್ಯಾಲರಿಯಿಂದಾಗಿ ತೂಕ ಹೆಚ್ಚಿಸಬಹುದು. ಆದ ರೆ ಗೋಡಂಬಿಯು ತೂಕ ಕಳೆದುಕೊಳ್ಳಲು ನೆರವಾಗಲಿದೆ ಎಂದು ನಿಮಗೆ ತಿಳಿದಿದೆಯಾ? ಹೌದು, ಗೋಡಂಬಿಯಿಂದಲೂ ತೂಕ ಕಳೆದುಕೊಳ್ಳಬಹುದು.

ತೂಕ ಹೆಚ್ಚಿಸಲು ಗೋಡಂಬಿಯು ನೆರವಾಗುತ್ತದೆ ಎಂದಾದರೆ ಇದನ್ನು ಯಾಕೆ ಸೇವಿಸಬೇಕು? ಆದರೆ ಗೋಡಂಬಿಯಲ್ಲಿ ಇರುವಂತಹ ಕೆಲವೊಂದು ಆರೋಗ್ಯಲಾಭಗಳ ಬಗ್ಗೆ ತಿಳಿದು ಕೊಂಡು ನೀವು ಮುಂದುವರಿಯಿರಿ.

*ಗೋಡಂಬಿಯಲ್ಲಿ ಆರೋಗ್ಯಕರ ಕೊಬ್ಬು ಇದ್ದು, ಇದು ಕೊಲೆಸ್ಟ್ರಾಲ್ ಮಟ್ಟ ಕಡಿಮೆ ಮಾಡುವುದು. ಇದರಲ್ಲಿರುವ ಉನ್ನತ ಮಟ್ಟದ ಆಯಂಟಿಆಕ್ಸಿಡೆಂಟ್ ಹೃದಯವನ್ನು ಆರೋಗ್ಯವಾಗಿಡುವುದು.

*ಗೋಡಂಬಿಯಲ್ಲಿರುವಂತಹ ಪ್ರೋಟೀನ್ ದಿನವಿಡಿ ನಿಮ್ಮ ದೇಹವು ಶಕ್ತಿಭರಿತವಾಗಿರುವಂತೆ ನೋಡಿಕೊಳ್ಳುವುದು.

*ಗೋಡಂಬಿಯಲ್ಲಿ ವಿಟಮಿನ್ ಸಿ, ಥೈಮೇನ್, ವಿಟಮಿನ್ ಬಿ6, ಮ್ಯಾಂಗನೀಸ್, ಸತು, ತಾಮ್ರ, ಕಬ್ಬಿಣ ಮತ್ತು ಪೊಟಾಶಿಯಂ ಇದೆ.

ಹೆಚ್ಚಿನ ಪ್ರಮಾಣದಲ್ಲಿರುವ ಮೆಗ್ನಿಶಿಯಂ ಇದನ್ನೊಂದು ಆರೋಗ್ಯಕರ ಆಹಾರವನ್ನಾಗಿಸಿದೆ. ಇದು ಅಧಿಕ ರಕ್ತದ ಒತ್ತಡವನ್ನು ಕಡಿಮೆಗೊಳಿಸಲು ನೆರವಾಗುತ್ತದೆ. ಇಂದಿನಧಾವಂತದ ದಿನಗಳಲ್ಲಿ ಅಧಿಕ ರಕ್ತದೊತ್ತಡ ಎಲ್ಲೆಡೆ ಸಾಮಾನ್ಯವಾಗಿ ಕಂಡುಬರುತ್ತಿರುವಾಗ ಗೋಡಂಬಿ ಒಂದು ಆಪದ್ಬಾಂಧವನಂತೆ ಕೆಲಸ ಮಾಡುತ್ತದೆ.ಗೋಡಂಬಿಯಲ್ಲಿರುವ ಉತ್ತಮ ಪ್ರಮಾಣದ ತಾಮ್ರಕೂದಲ ಹೊಳಪು ಮತ್ತು ಬಣ್ಣವನ್ನು ಉಳಿಸಿಕೊಳ್ಳಲು ನೆರವಾಗುತ್ತದೆ. ಕೂದಲು ನೆರೆಯಲು ತಾಮ್ರದ ಕೊರತೆ ಅಥವಾ ತಾಮ್ರವನ್ನು ಹಿಡಿದಿಟ್ಟುಕೊಳ್ಳುವ ಕ್ಷಮತೆ ಕಡಿಮೆಯಾಗುವುದೇ ಕಾರಣ ಎಂದು ಇತ್ತೀಚೆಗೆ ತಿಳಿದುಬಂದಿರ ತಿಳಿದುಬಂದಿದೆ.

ಗೋಡಂಬಿಯ ಉತ್ತಮ ಗುಣಗಳು ಇಷ್ಟೇ ಎಂದು ನಿಗದಿಪಡಿಸುವಂತಿಲ್ಲ. ಏಕೆಂದರೆ ಇದರಲ್ಲಿರುವ ಹಲವು

ಪೋಷಕಾಂಶಗಳು ಎಷ್ಟರ ಮಟ್ಟಿಗೆ ಆರೋಗ್ಯಕ್ಕೆ ಪೂರಕ ಎಂಬುದನ್ನು ದಿನಗಳೆದಂತೆ ಸಂಶೋಧನೆಗಳು ತಿಳಿಸುತ್ತಾ ಬರುತ್ತಿವೆ. ಅಂತೆಯೇ ಇದರಲ್ಲಿರುವ ಮೆಗ್ನಿಶಿಯಂ ನರವ್ಯವಸ್ಥೆಯನ್ನು ಬಲಪಡಿಸುತ್ತದೆ ಮತ್ತು ಇನ್ನೊಂದು ವಿಶೇಷವೆಂದರೆ



ಮೂಳೆಗಳಿಗೆ ಅಂಟಿಕೊಂಡಿರುವ ನರಗಳ ಗೋಡೆಗಳ ಮೂಲಕ ಕ್ಯಾಲ್ಸಿಯಂ ನರಗಳ ಒಳಭಾಗ ಪ್ರವೇಶಿಸುವುದನ್ನು ತಡೆಯುತ್ತದೆ.

ಒಂದು ವೇಳೆ ಕ್ಯಾಲ್ಸಿಯಂ ಮೂಳೆಗಳಿಂದ ಸಡಿಲವಾಗಿ ನರಗಳು ಹೀರಿಕೊಳ್ಳುವಂತಾದರೆ ನರಗಳು ಗಟ್ಟಿಯಾಗಿಬಿಡುತ್ತವೆ. ಇದು ರಕ್ತದೊತ್ತಡವನ್ನುತ ಹೆಚ್ಚಿಸುತ್ತದೆ ಮತ್ತು ಇತರ ದುಷ್ಪರಿಣಾಮಗಳನ್ನೂ ಹುಟ್ಟುಹಾಕುತ್ತದೆ. ಇದೇ ರೀತಿ ಸ್ನಾಯುಗಳೂ ಸೆಡೆತಗೊಳ್ಳುವುದರಿಂದ ರಕ್ಷಣೆ ಪಡೆಯುತ್ತವೆ ಮತ್ತು ಆರೋಗ್ಯಕ್ಕೆ ಅಗತ್ಯವಿರುವಷ್ಟೇ ಸಡಿಲತೆಯನ್ನು ಸಾಧ್ಯವಾಗುತ್ತದೆ. ಹೊಂದಲು

ಗೋಡಂಬಿಯಲ್ಲಿರುವ ಮೆಗ್ನಿಶಿಯಂ ಮತ್ತು ಕ್ಯಾಲ್ಸಿಯಂ ಮೂಳೆ ಮತ್ತು ಹಲ್ಲುಗಳ ದೃಢತೆಯನ್ನು ಹೆಚ್ಚಿಸಲು ಸಕ್ಷಮವಾಗಿವೆ. ನಿತ್ಯವೂ ನಾಲ್ಕಾರುಗೋಡಂಬಿಗಳನ್ನು ತಿನ್ನುತ್ತಾ ಬಂದರೆ ಮೂಳೆ ಮತ್ತು ಹಲ್ಲುಗಳು ಸದೃಢವಾಗಿರಲು ಸಾಧ್ಯವಾಗುತ್ತದೆ. ಅಲ್ಲದೇಗೋಡಂಬಿ ಒಸಡುಗಳಿಗೂ ಉತ್ತಮವಾಗಿದೆ.

**ಆಹಾರ ಕ್ರಮದಲ್ಲಿ ಗೋಡಂಬಿ**

ಸೇರ್ಪಡೆ ಹುರಿದಿರುವಂತಹಗೋಡಂಬಿಗಳು, ಕರಿದು ಉಪ್ಪು ಹಾಕಿರುವಂತಹ ಗೋಡಂಬಿಗಿಂತ ತುಂಬಾ ಒಳ್ಳೆಯದು. ಕರಿದರೆ ಅದರಲ್ಲಿ ಇರುವಂತಹ ಕೊಬ್ಬು ಮತ್ತಷ್ಟು ಹೆಚ್ಚಾಗುವುದು. ಏಕ ಮತ್ತು ಬಹುಪರ್ಯಾಪ್ತ ಕೊಬ್ಬಿರುವ ಗೋಡಂಬಿಯು ಪ್ರಾಣಿಜನ್ಯಪ್ರೋಟೀನ್ ಮತ್ತು ಕೊಬ್ಬಿಗೆ ಒಳ್ಳೆಯ ಪರ್ಯಾಯ. ಪ್ರಾಣಿಜನ್ಯ ಕೊಬ್ಬು ಹಾಗೂ ಪ್ರೋಟೀನ್ ಗೆ ಗೋಡಂಬಿಯು ಒಳ್ಳೆಯದು ಮತ್ತು ಇದರಿಂದ ರುಚಿಕರ ತಿನಿಸುಗಳನ್ನು ತಯಾರಿಸಬಹುದು.

ಈ ಮೂಲಕವಾಗಿ ನೀವು ತೂಕ ಕಳೆದುಕೊಳ್ಳುವುದು ಮಾತ್ರವಲ್ಲದೆ, ಹೃದಯಲ್ಲಿ ಜಮೆಯಾಗಿರುವ ಕೊಬ್ಬು ಮತ್ತು ಕೊಲೆಸ್ಟ್ರಾಲ್ ತಗ್ಗಿಸಬಹುದು. ನಿಮ್ಮ ಆಹಾರಕ್ರಮದಲ್ಲಿ ಗೋಡಂಬಿ ಸೇರಿಸಲು ಒಳ್ಳೆಯ ವಿಧಾನವೆಂದು ಒಂದು ಹಿಡಿ ಹಸಿ ಗೋಂ ಡಂಬಿ ಸೇವಿಸುವುದು. ಇದನ್ನು ನಿಮ್ಮ ಆಹಾರ ಅಥವಾ ಬೇರೆ ಯಾವುದೇ ತಿನಿಸಿನೊಂದಿಗೆ ಸೇರಿಸಬಹುದು.

# ಕಣ್ಣಿನ ಕಪ್ಪು ಕಲೆ ಸಮಸ್ಯೆಯೇ

ಕಪ್ಪುವೃತ್ತಗಳು ಸಣ್ಣವಯಸ್ಸಿನಲ್ಲೇ ಕಾಣಿಸಿಕೊಳ್ಳಬಹುದು, ಆದರೆ ಇದು ಹೆಚ್ಚಾಗಿ ವಯಸ್ಕರಲ್ಲಿ ಕಾಣಿಸಿಕೊಳ್ಳುತ್ತದೆ. ಇದನ್ನು ತಡೆಯಲು ಉತ್ತಮ ವಿಧಾನವೆಂದರೆ ಪೌಷ್ಟಿಕ ಆಹಾರ ತೆಗೆದುಕೊಳ್ಳುವುದು, ತಾಜಾ ಹಣ್ಣು ತಿನ್ನುವುದು ಮತ್ತು ಮೊಸರು ಬೇಳೆಕಾಳುಗಳು, ಸಂಸ್ಕರಿಸಿದ ಧಾನ್ಯಗಳು, ಕೆನೆ ತೆಗೆದ ಹಾಲು, ಸೊಪ್ಪುಗಳು ಮತ್ತು ಬೀನ್ಸ್ ಇವುಗಳನ್ನು ಹೆಚ್ಚಾಗಿ ಬಳಸುವುದು.

ಪ್ರತಿದಿನ ವ್ಯಾಯಾಮ ಮಾಡುವುದು, ರಕ್ತ ಸಂಚಲನ ಸುಲಭವಾಗಿ ಆಗಲು ಉಸಿರಾಟದ ವ್ಯಾಯಾಮಗಳನ್ನು ಮಾಡುವುದು ಮತ್ತು ಒತ್ತಡ, ಆತಂಕಗಳನ್ನು ಕಡಿಮೆ ಮಾಡಿಕೊಳ್ಳುವುದು ಕೂಡ ಕಪ್ಪು ವೃತ್ತ ತಡೆಯಲು ಉತ್ತಮ ವಿಧಾನವಾಗಿದೆ.

ಪ್ರತಿದಿನ ಕಡಿಮೆ ಎಂದರೆ 7 ತಾಸು ನಿದ್ದೆ ಮಾಡಿ. ಪ್ರತಿದಿನ 20 ನಿಮಿಷ ಧ್ಯಾನ ಮತ್ತು ಸಂಗೀತ ಕೇಳುವುದರ ಮೂಲಕ ಕಳೆಯಿರಿ. ಕ್ರೀಂ ಹಚ್ಚುವಾಗ ಮತ್ತುಮೇಕಪ್ ಮಾಡುವಾಗ ನಿಧಾನವಾಗಿ ಹಚ್ಚಿ. ಕಣ್ಣಿನ ಕೆಳ ಭಾಗದಲ್ಲಿ ಹೆಚ್ಚು ಮಸಾಜ್ ಮಾಡಬೇಡಿ. ಕಣ್ಣಿನ ಕೆಳಗೆ ಮಸಾಜ್ ಮಾಡಲು ವೃತ್ತಿಪರ ಮಸಾಜುಗಾರರಿಗೆ ಮಾತ್ರ ಅವಕಾಶ ಕೊಡಿ.


ಕಣ್ಣಿನ ಸುತ್ತ ವಿಶೇಷವಾಗಿ ಅದಕ್ಕೆಂದೇ ತಯಾರಿಸಿದ ಕ್ರೀಮ್ ಬಳಸಿ. 15 ನಿಮಿಷಗಳ ನಂತರ ಹತ್ತಿಯಿಂದ ಒರೆಸಿ ತೆಗೆಯಿರಿ. ರಾತ್ರಿ ಪೂರ್ತಿ ಕ್ರೀಂ ಅನ್ನು ಹಾಗೆಯೇ ಬಿಡಬೇಡಿ. ಬಾದಾಮಿಯನ್ನು ಒಳಗೊಂಡ ಕಣ್ಣಿನ ಕೆಳಗೆ ಬಳಸುವ ಕ್ರೀಂ ಅನ್ನು ಬಳಸಿ ಇದರಲ್ಲಿ ಪೋಷಕಾಂಶಗಳು ಅಧಿಕವಾಗಿ ಇರುತ್ತವೆ. ಇದು ರಕ್ತ ಸಂಚಲನವನ್ನು ಸುಗಮವಾಗಿಸುತ್ತದೆ. ಕಣ್ಣಿನ ಸುತ್ತ ಫೇಶಿಯಲ್ ಮಾಸ್ಕ್ ಬಳಸಬೇಡಿ.

ಕಣ್ಣಿನ ಆಯಾಸ ಕಡಿಮೆ ಮಾಡಲು ಬೆಚ್ಚಗಿನ ನೀರಿನಿಂದ ತೊಳೆಯಿರಿ ನಂತರ ತಣ್ಣನೆ ನೀರಿನಿಂದ

ಕೂಡ ಕಣ್ಣನ್ನು ತೊಳೆಯಿರಿ. ಇದು ರಕ್ತ ಸಂಚಲನವನ್ನು ಸುಗಮವಾಗಿಸುವುದರ ಮೂಲಕ ಕಪ್ಪು ವೃತ್ತಹೋಗಲಾಡಿಸುತ್ತದೆ. ಸೌತೆಕಾಯಿಯ ರಸವನ್ನು ಪ್ರತಿದಿನ ಕಣ್ಣಿನ ಸುತ್ತ ಹಚ್ಚಿ ಮತ್ತು 15 ನಿಮಿಷದ ನಂತರ ನೀರಿನಿಂದ ತೊಳೆಯಿರಿ.

ಕಪ್ಪು ವೃತ್ತ ಹೋಗಲಾಡಿಸಲು ಆಲುಗಡ್ಡೆ ಮತ್ತು ಸೌತೆಕಾಯಿ ಮಿಶ್ರಣದ ರಸವನ್ನು ಕೂಡ ಬಳಸಬಹುದು.

ನಿಂಬೆ ಹಣ್ಣು ಮತ್ತು ಸೌತೆ ಕಾಯಿಯನ್ನು ಸಮಪ್ರಮಾಣದಲ್ಲಿ ಬೆರೆಸಿ ಅದರ ರಸವನ್ನು ಪ್ರತಿದಿನ ಹಚ್ಚಿ ಮತ್ತು 15 ನಿಮಿಷದ ನಂತರ ನೀರಿನಲ್ಲಿ ತೊಳೆದುಕೊಂಡರೆ ಕಪ್ಪು ವೃತ್ತಕ್ಕೆ ಮುಕ್ತಿ ಸಿಗುತ್ತದೆ.



ಟೊಮೆಟೊ ಜ್ಯೂಸ್ ಕೂಡ ಅಷ್ಟೇ ಒಳ್ಳೆಯದು. ಇದನ್ನು ಹಚ್ಚಿ 20 ನಿಮಿಷ ಹಾಗೆಯೇ ಬಿಡಿ. ಇದಕ್ಕೆ ಐಸ್ ಅಥವಾ ತಣ್ಣನೆಯ ನೀರನ್ನು ಹಚ್ಚಿ 10 ನಿಮಿಷ ಹಾಗೆಯೇ ಬಿಡಿ.

ತಣ್ಣಗಿನ ಟೀ ಬ್ಯಾಗ್ ಅನ್ನು ಕಣ್ಣಿನ ಕೆಳಭಾಗದಲ್ಲಿ ಇಡುವುದರಿಂದ ಕೂಡ ಕಣ್ಣಿನ ಕಪ್ಪು ಕಲೆಗಳು ಮಾಯವಾಗುತ್ತವೆ.

ಬಾದಾಮಿ ಎಣ್ಣೆ ಕೂಡ ಉತ್ತಮ ಮನೆ ಮದ್ದು.ಮಲಗುವ ಮೊದಲು ಬಾದಾಮಿ ಮತ್ತು ಹಾಲನ್ನು ಮಿಶ್ರ ಮಾಡಿ ಅದನ್ನು ಕಣ್ಣಿನ ಸುತ್ತಲು ಹಚ್ಚಿ. ಮಾರನೆಯ ದಿನ ಬೆಳಗ್ಗೆ ತಣ್ಣನೆಯ ನೀರಿನಿಂದ ತೊಳೆಯಿರಿ.

ಜಜ್ಜಿದ ಪುದೀನ ಎಲೆಗಳು ಕೂಡ ಕಣ್ಣಿನ ಸುತ್ತಲಿನ ಕಪ್ಪು ಕಲೆ ಹೋಗಲಾಡಿಸಲು ಉತ್ತಮ ಮದ್ದು. ಜಜ್ಜಿನ ಪುದೀನವನ್ನು ಕಣ್ಣಿನ ಕೆಳಭಾಗಕ್ಕೆ ಹಚ್ಚಿ ಮತ್ತು 10 ರಿಂದ 15 ನಿಮಿಷ ಬಿಟ್ಟು ತೊಳೆಯಿರಿ.

ಕಿತ್ತಳೆ ರಸವನ್ನು ಗ್ಲಿಸರಿನ್ ಜೊತೆ ಬೆರೆಸಿ ವಾರದಲ್ಲಿ 3 ಭಾರಿ ಕಣ್ಣಿನ ಸುತ್ತ ಹಚ್ಚಿ 20 ನಿಮಿಷದ ನಂತರ ತೊಳೆಯಿರಿ. ಕಣ್ಣಿನ ಸುತ್ತಲ ಕಪ್ಪು ಕಲೆಗಳನ್ನು ಹೋಗಲಾಡಿಸಿ

# ಎನ್‌ಟಿಸಿ ಯಶಸ್ಸು ಸಂಭ್ರಮ, ಎಸ್.ಎಂ.ಇ. ಬಿ.ಆರ್.ಇ ಸಾಲ ಉತ್ಪನ್ನ ಬಿಡುಗಡೆ

**ಬಳ್ಳಾರಿ, ಆ.27–**ಬಳ್ಳಾರಿ ಜಿಲ್ಲಾ ವಾಣಿಜ್ಯ ಹಾಗೂ ಕೈಗಾರಿಕಾ ಸಂಸ್ಥೆಯ ಸಭಾಂಗಣದಲ್ಲಿ ಆಗಸ್ಟ್ 25, ಸೋಮವಾರ ಬೆಳಿಗ್ಗೆ 10.30ಕ್ಕೆ "ಬಳ್ಳಾರಿ ಎನ್‌ಟಿಸಿ ಯಶಸ್ಸು ಸಂಭ್ರಮ ಹಾಗೂ SME BRE ಸಾಲ ಉತ್ಪನ್ನದ ನೇರ ಪ್ರದರ್ಶನ" ಕಾರ್ಯಕ್ರಮವು ಬಿ.ಡಿ.ಸಿ.ಸಿ.ಐ ಸಂಸ್ಥೆಯ ಸಭಾಂಗಣದಲ್ಲಿ ಅದ್ದೂರಿಯಾಗಿ ನಡೆಯಿತು.


ಈ ಕಾರ್ಯಕ್ರಮವನ್ನು ಬಳ್ಳಾರಿ ಜಿಲ್ಲಾ ವಾಣಿಜ್ಯ ಹಾಗೂ ಕೈಗಾರಿಕಾ ಸಂಸ್ಥೆ, ಇನ್ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಟ್ಯಾಕ್ಸ್ ಪ್ರ್ಯಾಕ್ಟಿಷನರ್ಸ್ ಇಂಡಿಯಾ, ಬಳ್ಳಾರಿ ತೆರಿಗೆ ಸಲಹೆಗಾರರ ಸಂಘ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (ಖಃಖ) ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ಸಂಸ್ಥೆಯ ಅಧ್ಯಕ್ಷ ಯಶವಂತ ರಾಜ್ ನಾಗಿರೆಡ್ಡಿ, ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತೆ, ಶ್ರೀಮತಿ ಸೋನಲ್ ಜಿ. ನಾಯಕ್, ಉಪ ಆಯುಕ್ತರು ಇನಾಮ್ದಾರ್ ಎ., ಅವರ ಸಾನ್ನಿಧ್ಯದಲ್ಲಿ ನೆರವೇರಿಸಲಾಯಿತು.

ಸಮಾರಂಭದಲ್ಲಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷ ಯಶವಂತ ರಾಜ್ ನಾಗಿರೆಡ್ಡಿ ಅವರು ಸಣ್ಣ ಮತ್ತು ಮಧ್ಯಮ ಉದ್ಯಮಗಳ (ಖಒಇ) ಬಿಸಿನೆಸ್ ರೂಲ್ ಎಂಜಿನ್ ಲೋನ್ ಉತ್ಪನ್ನ ಕಾರ್ಯಕ್ರಮದ ಮುಖ್ಯ ಉದ್ದೇಶವು ಹೊಸ ಉದ್ಯಮ ಆರಂಭಿಸಲು ಬಯಸುವ ಉದ್ಯಮಿಗಳಿಗೆ ಅಗತ್ಯವಾದ ಆರ್ಥಿಕ ನೆರವು ಹಾಗೂ ವಿವಿಧ ರೀತಿಯ ಉತ್ಪನ್ನಗಳನ್ನು ಒದಗಿಸುವುದಾಗಿದೆ. ಇಂತಹ ಯೋಜನೆಗಳನ್ನು ಜಾರಿಗೊ ಳಿಸುವುದರಿಂದ ನೂತನ ಉದ್ಯಮಿಗಳಿಗೆ ಧೈರ್ಯ, ಆತ್ಮವಿಶ್ವಾಸ ಮತ್ತು ನವಚೈತನ್ಯ ದೊರೆತು, ತಮ್ಮ ಉದ್ಯಮವನ್ನು ಯಶಸ್ವಿಯಾಗಿ ಸ್ಥಾಪಿಸಿ ವಿಸ್ತರಿಸಲು ಹೆಚ್ಚಿನ ಅವಕಾಶಗಳು ಲಭಿಸುತ್ತವೆ. ಅಂತೆಯೇ, SME ಬಿಸಿನೆಸ್ ರೂಲ್ ಎಂಜಿನ್ ಲೋನ್ ಉತ್ಪನ್ನ ಕಾರ್ಯಕ್ರಮವು ನವ ಉದ್ಯಮಿಗಳಿಗೆ ದೃಢವಾದ ಬೆಂಬಲ ವ್ಯವಸ್ಥೆಯಾಗಿ, ಅವರ ಕನಸುಗಳನ್ನು ನೈಜಗೊಳಿಸುವ ದಾರಿಯಲ್ಲೊಂದು ಮಹತ್ವದ ಹೆಜ್ಜೆಯಾಗುತ್ತದೆ ಎಂದು ತಿಳಿಸಿದರು.

ಬಿಡಿಸಿಸಿಐ ಗೌರವ ಕಾರ್ಯದರ್ಶಿ ಕೆ.ಸಿ. ಸುರೇಶ್ ಬಾಬು ಅವರು ಮಾತನಾಡಿ, "ನಮ್ಮ ಸಂಸ್ಥೆಯಲ್ಲಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ನಮ್ಮ ಭಾಗ್ಯ. ಇದರಿಂದ ಎಲ್ಲಾ ಟ್ರೇಡ್ ಮತ್ತು ಇಂಡಸ್ಟ್ರಿ ಕ್ಷೇತ್ರದವರಿಗೆ ಉಪಯುಕ್ತವಾಗುತ್ತದೆ" ಎಂದು ಹೇಳಿದರು.

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತೆ, ಶ್ರೀಮತಿ ಸೋನಲ್ ಜಿ ನಾಯಕ್ ರವರು ಮಾತನಾಡುತ್ತಾ. ಬಳ್ಳಾರಿ ಟ್ಯಾಕ್ಸ್ ಪ್ರಾಕ್ಟಿಸ್ನರ್‌ಗಳ ಸಂಘಟನೆಯ ಕಾರ್ಯವೈಖರಿಯನ್ನು ಶ್ಲಾಘಿಸಿದ ವಾಣಿಜ್ಯ ತೆರಿಗೆ ಇಲಾಖೆಯ ಜಾಯಿಂಟ್ ಕಮಿಷನರ್, ಶ್ರೀಮತಿ




ಸೋನಾಲ ಜಿ ನಾಯಕ್, "ಸಂಘಟನೆಯಲ್ಲಿ ಬಲವಿದೆ" ಎಂಬುದನ್ನು ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಟ್ಯಾಕ್ಸ್ ಪ್ರಾಕ್ಟಿಸ್ನ ರ್‌ಗಳು ತೋರಿಸಿದ್ದಾರೆ. ಯಾವುದೇ ಸಮಸ್ಯೆ ಇದ್ದರೂ ನಮ್ಮನ್ನು ಭೇಟಿ ಮಾಡಿದರೆ, ಖಂಡಿತವಾಗಿ ಸ್ಪಂದಿಸುತ್ತೇವೆ" ಎಂದು ತಿಳಿಸಿದರು.

ಇಂತಹ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಒಳ್ಳೆಯ ವೇದಿಕೆ ಆಗಿರುತ್ತದೆ" ಎಂದು ಹೇಳಿದರು.

ಐ.ಸಿ.ಟಿ.ಪಿ.ಐ ಸಂಸ್ಥೆಯ ಅಧ್ಯಕ್ಷರಾದ ಶ್ರೀಧರ ಪಾರ್ಥಸಾರಥಿ ಅವರು ಸಂಸ್ಥೆಯು ನಡೆದು ಬಂದ ದಾರಿ ಕಾರ್ಯಕ್ರಮದಲ್ಲಿ ಮಾತನಾಡಿದರು. ಈ ಸಂದರ್ಭದಲ್ಲಿ ಅವರು, ಉದ್ಯಮಿಗಳಿಗೆ ಸಾಲ ಸೌಲಭ್ಯಗಳನ್ನು ಸುಲಭವಾಗಿ ಪಡೆಯಲು ಸಂಸ್ಥೆ ನೆರವಾಗಲಿದೆ ಎಂದು ತಿಳಿಸಿದರು. ಅವರು ಮುಂದುವರಿದು, ಉದ್ಯಮ ನಡೆಸಲು ಅಗತ್ಯವಾದ ನೂತನ ತಂತ್ರಜ್ಞಾನ, ಮಾರುಕಟ್ಟೆ ಸಂಪರ್ಕ ಮತ್ತು ಆರ್ಥಿಕ ಸಂಪನ್ಮೂಲಗಳನ್ನು ಪಡೆಯುವಲ್ಲಿ ಸಂಸ್ಥೆ ಮಾರ್ಗದರ್ಶನ ನೀಡುವುದಾಗಿ ಹೇಳಿದರು.

ಇದರಿಂದ ಹೊಸ ಉದ್ಯಮಿಗಳು ಆರ್ಥಿಕ ಅಡೆತಡೆಗಳನ್ನು ತೊಲೆದು, ತಮ್ಮ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಸಾಧ್ಯವಾಗುತ್ತದೆ. ಜೊತೆಗೆ ಮಾರುಕಟ್ಟೆಯಲ್ಲಿ ಸ್ಪರ್ಧಾತ್ಮಕ ಸ್ಥಾನವನ್ನು ಪಡೆಯುವಲ್ಲಿ ಸಹಾಯವಾಗುತ್ತದೆ ಎಂದು ಪಾರ್ಥಸಾರಥಿ ವಿಶ್ವಾಸ ವ್ಯಕ್ತಪಡಿಸಿದರು.

ಶಿವಕುಮಾರ್ ಅವರು ಅತಿಥಿಗಳಿಗೆ ಹೃತ್ಪೂರ್ವಕ ಸ್ವಾಗತ ಕೋರಿದರು. ಬಳ್ಳಾರಿ ಜಿಲ್ಲಾ ತೆರಿಗೆ ಸಲಹೆಗಾರರ ಸಂಘದ ಅಧ್ಯಕ್ಷರಾದ ಶ್ರೀ ವೆಂಕಟೇಶ ಕುಲಕರ್ಣಿ ಅವರು ವಂದನಾರ್ಪಣೆ ಸಲ್ಲಿಸಿದರು.ಕಾರ್ಯಕ್ರಮದಲ್ಲಿ ಶಿವಕುಮಾರ್ ಜಿ.ಎಂ, ಡಾ. ದಿಲೀಪ್ ಕುಮಾರ್ ಎಚ್.ಜಿ, ಡಾ. ಕೆ.ಎಸ್. ಮಹಾಂತೇಶ್ ವಿಶೇಷ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಜೊತೆಗೆ ಹಿರಿಯ ಉಪಾಧ್ಯಕ್ಷ ಅವ್ವಾರು ಮಂಜುನಾಥ, ಸೊಂತಗಿರಿಧರ್, ಗೌರವ ಕಾರ್ಯದರ್ಶಿ ಕೆ.ಸಿ. ಸುರೇಶ್ ಬಾಬು, ಜಂಟಿ ಕಾರ್ಯದರ್ಶಿಗಳು ಡಾ. ಮರ್ಚೇಡ್ ಮಲ್ಲಿಕಾರ್ಜುನಗೌಡ ಹಾಗೂ ವಿ. ರಾಮಚಂದ್ರ, ಸೇರಿದಂತೆ ಕಾರ್ಯಕಾರಿ ಸಮಿತಿ ಸದಸ್ಯರು, ವಿಶೇಷ ಆಹ್ವಾನಿತರು, ಸಂಘ ಸಂಸ್ಥೆಗಳ ಪ್ರತಿನಿಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಆರ್.ಬಿ.ವೈ.ಎಂ.ಕಾಲೇಜಿನಲ್ಲಿ ಉದ್ಯಮಶೀಲತಾ ಜಾಗೃತಿ

**ಬಳ್ಳಾರಿ.ಅ,27–** ರಾವ್ ಬಹದ್ದೂರ್ ವೈ. ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯ ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ಸೆಮಿನಾರ್ ಹಾಲ್‌ನಲ್ಲಿ , ಕಾಲೇಜಿನ ಉದ್ಯಮಶೀಲತೆ ಅಭಿವೃದ್ಧಿ ಕೋಶ ಮತ್ತು ಭಾರತಸರ್ಕಾರದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವಾಲಯದ ಅಭಿವೃದ್ಧಿ ಮತ್ತು ಅನುಕೂಲ ಕಚೇರಿ, ಹುಬ್ಬಳ್ಳಿ ಇವರ ಸಹಯೋಗದಲ್ಲಿ "ಉದ್ಯಮಶೀಲತಾ ಜಾಗೃತಿ" ಕಾರ್ಯಕ್ರಮ ನಡೆಸಲಾಯಿತು.

ವೀ.ವೀ. ಸಂಘದ ಉಪಾಧ್ಯಕ್ಷರು ಹಾಗೂ ಆರ್.ವೈ.ಎಂ.ಇ.ಸಿ. ಅಧ್ಯಕ್ಷರಾದ ಜಾನೇಕುಂಟೆ ಬಸವರಾಜ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಉದ್ಯೋಗಾಕಾಂಕ್ಷಿಗಳಾಗದೆ, ಉದ್ಯೋಗ ಸೃಷ್ಟಿಕರ್ತರಾಗುವ ಮಹತ್ವವನ್ನು ಒತ್ತಿ ಹೇಳಿದರು. ಇವರಜೊತೆಗೆ, ಆರ್.ವೈ.ಎಂ.ಇ.ಸಿ. ಆಡಳಿತಮಂಡಳಿ ಸದಸ್ಯರು ಬಾಡದಪ್ರಕಾಶ್, ಪ್ರಭು ಸ್ವಾಮಿ ಅವರು ಉಪಸ್ಥಿತರಿದ್ದು, ವಿದ್ಯಾರ್ಥಿಗಳಿಗೆ ಸ್ಫೂರ್ತಿ ತುಂಬಿದರು. ಕಾರ್ಯಕ್ರಮದ ಗಣ್ಯ ಅತಿಥಿಗಳಾಗಿ, ಎಂಎಸ್ ಎಂಇ, ಡಿಎಫ್‌ಓ, ಹುಬ್ಬಳ್ಳಿಯ ಸಹಾಯಕ ನಿರ್ದೇಶ'ಕರಾದ ಕಿರಣ್ ಕುಮಾರ್.ಡಿ ಅವರು ಸರ್ಕಾರದ ವಿವಿಧ ಉದ್ಯಮಶೀಲತಾ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. ಕರ್ನಾಟಕ ಗ್ರಾಮೀಣ ಬ್ಯಾಂಕ್ (ಕೆ.ಜಿ.ಬಿ), ಬಳ್ಳಾರಿಯ ಮುಖ್ಯ ವ್ಯವಸ್ಥಾಪಕರಾದ ಚಂದನ್ ಸಿಂಗ್ ಅವರು ಉದ್ಯಮಪ್ರಾರಂಭಿಸಲು ಬ್ಯಾಂಕ್ ನೆರವು ಮತ್ತು ಹಣಕಾಸು ನಿರ್ವಹಣೆಯ ಬಗ್ಗೆ ಉಪಯುಕ್ತ ಸಲಹೆಗಳನ್ನು ನೀಡಿದರು. ಜಿಲ್ಲಾ ಕೈಗಾರಿಕಾ ಕೇಂದ್ರ (ಡಿಐಸಿ), ಬಳ್ಳಾರಿಯ ಜಂಟಿ ನಿರ್ದೇಶಕ ಸೋಮಶೇಖರ್ ಅವರು



ಜಿಲ್ಲಾ ಕೈಗಾರಿಕಾ ಕೇಂದ್ರಗಳ ಮೂಲಕ ಲಭ್ಯ ವಿರುವ ಸಂಪನ್ಮೂಲಗಳ ಕುರಿತು ಮಾತನಾಡಿದರು. ಕಾಲೇಜಿನ ಪ್ರಾಂಶುಪಾಲರಾದ ಡಾ.ಟಿ.ಹನುಮಂತರೆಡ್ಡಿ ಮತ್ತು ಉಪಪ್ರಾಂ ಶುಪಾಲರಾದ ಡಾ. ಸವಿತಾ ಸೋನೋಳಿ, ಇಡಿಸಿ ಸಂಯೋಜಕರಾದ ಡಾ.ಆರ್. ಎಚ್. ಎಂ. ಸೋಮನಾಥ ಸ್ವಾಮಿ, ಇಡಿಸಿ ಸದಸ್ಯರಾದ ಪ್ರೊ. ಬೆರ್ಗಿ ವೀರೇಶ್, ಡಾ. ಲಿಂಗನ ಗೌಡ, ಡಾ. ಮಹೇಶ್.ಜಿ ಮತ್ತು ಪ್ರೊ. ಶ್ರೀಧರ್ ಬೆಳಗಿ, ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ. ಕೋರಿ ನಾಗರಾಜ್, ಎಂಪಿಎಂ ಪಿಜಿ ಕೋ-ಆರ್ಡಿನೇಟರ್, ಡಾ. ತೋಟಪ್ಪ, ಡಾ.ಕೊಂಡೇಕಲ್ ಮಂಜುನಾಥ, ಪ್ರೊ.ಚಂದ್ರಶೇಖರ ಹಿರೇಗೌಡರ್, ಡಾ.ಕೊಟ್ರೇಶ್ ಸರ್ದಾರ, ಡಾ.ಎಸ್.ಪಿ. ಜಗದೀಶ, ಡಾ. ವಿರುಪಾಕ್ಷಗೌಡ, ಪ್ರೊ. ಎನ್. ಸ್ವಾಮಿ, ಡಾ. ವಡ್ಡಿನ ಚೇತನ್, ಪ್ರೊ.ಲಕ್ಷ್ಮಣ್ ನಾಯಕ್, ಡಾ. ಚಂದ್ರಗೌಡ.ಎಂ. ಉಪಸ್ಥಿತರಿದ್ದರು.

# ಶಾಲಾ ಗ್ರಂಥಾಲಯ ನಿರ್ಮಾಣಕ್ಕೆ ಭೂಮಿಪೂಜೆ :ಶಿಕ್ಷಣಕ್ಕೆ ಹೆಚ್ಚಿನ ಒತ್ತು : ಶಾಸಕ ಲಕ್ಷ್ಮಣ ಸವದಿ

**ಅಥಣಿ,ಅ.27–** ತಾಲೂಕಿನ ಯಂಕಚ್ಚಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಸುಮಾರು 28.80 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಗ್ರಂಥಾಲಯ ಕಟ್ಟಡ ಕಾಮಗಾರಿಗೆ ಮಾಜಿ ಉಪ ಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಅವರು ಭೂಮಿ ಪೂಜೆ ನೆರವೇರಿಸಿದರು.

ಭೂಮಿ ಪೂಜೆ ನೆರವೇರಿಸಿ ನಂತರ ಶಾಸಕ ಲಕ್ಷ್ಮಣ ಸವದಿ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಗ್ರಂಥಾಲಯಗಳು ಅತ್ಯಗತ್ಯ. ಜ್ಞಾನಾರ್ಜನೆಗೆ ಗ್ರಂಥಾಲಯಗಳು ಉತ್ತಮ ವೇದಿಕೆಯಾಗಿದ್ದು, ವಿದ್ಯಾರ್ಥಿಗಳು ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಶಿಕ್ಷಣ ಕ್ಷೇತ್ರದಲ್ಲಿ ಇನ್ನೂ ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಪಂ ಅಭಿಯಂತರ ವಿರಣ್ಣಾ ವಾಲಿ. ಮುಖಂಡರಾದ ಶಿದರಾಯ ಯಲ್ಲಡಗಿ, ತುಕಾರಾಮ ಗೋಂದಳಿ, ಬಸವರಾಜ ಹೊಕ್ಕುಂಡಿ, ಶಂಕರ್ ರಾಮತೀರ್ಥ, ಅಪ್ಪು ಐಗಳಿ, ಮಹಾದೇವ ನಾಗನೂರ, ರಾಮಾ ಸನದಿ, ರಾಘವೇಂದ್ರ ಕಾಗವಾಡ,, ದತ್ತಾ ವಾಸ್ಟರ್, ಮಲ್ಲೇಶ್ ಹುದ್ದಾರ. ಮುಸ್ತಾಕ್ ಮುಲ್ಲಾ. ಬೀರಪ್ಪಾ ಯಂಕಚ್ಚಿ, ರಘು ದೊಡ್ಡಲಿಂಗಪ್ಪಗೋಳ, ಬಸವರಾಜ ಪೂಜಾರಿ, ಮಲ್ಲಪ್ಪಾ ಹೊಕ್ಕುಂಡಿ, ಅಡಿವೇಶ ಕೋಕಳೆ, ರಮೇಶ ಜಗತಾಪ, ಸಚೀನ ಗೊಂದಳೆ, ಚೈತನ್ ಗೊಂದಳೆ, ಪರಶುರಾಮ ಗೊಂದಳೆ, ಮುರುಗೆಪ್ಪಾ ಗೊಂದಳೆ, ಪರಶುರಾಮ ಲಾಂಡಗೆ. ಎಂ ಎಸ್ ಜಾಧವ, ಡಿ ಎನ್ ಶೆಟ್ಟೆ, ಎಸ್ ಡಿ ಕಾಂಬಳೆ, ಬಿ. ಕೆ ಗೌಡ, ಬಿ ಜಿ ನಂದಾ, ಕುಮಾರಿ ಬಿಸ್ಮಿಲ್ಲಾ, ಎಮ್ ಎಚ್ ಮಂಗರೊಳ, ಬಿ ಟಿ ಕಾಂಬಳೆ ಸೇರಿದಂತೆ ಗ್ರಾಮದ ಮುಖಂಡರು, ಇದ್ದರು

ಯುವ ಮಾರ್ಗ

ಗುರುವಾರ : 28–08–2025

## ಉಪ ಲೋಕಾಯುಕ್ತರಿಂದ ಆಗಸ್ಟ 29ರಂದು ರಾಯಚೂರಿನಲ್ಲಿ ಸಾರ್ವಜನಿಕ ಅಹವಾಲು ಸ್ವೀಕಾರ



**ರಾಯಚೂರು,ಆ.27–** ಗೌರವಾನ್ವಿತ ನ್ಯಾಯಮೂರ್ತಿಗಳು ಹಾಗೂ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಪೂರ್ವ ನಿಗದಿಯಂತೆ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಆಗಸ್ಟ್ 29ರಂದು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.30ರವರೆಗೆ ಮತ್ತು ಮಧ್ಯಾಹ್ನ 2.30ರಿಂದ ಸಂಜೆ 5 ಗಂಟೆವರೆಗೆ ಸಾರ್ವಜನಿಕರ ಅಹವಾಲು ಸ್ವೀಕರಿಸುವರು.

ಇದಕ್ಕು ಮೊದಲು ಬೆಳಿಗ್ಗೆ 6.30ಕ್ಕೆ ಚಹಾ ವಿರಾಮದ ನಂತರ ವಿವಿಧ ಸ್ಥಳಗಳಿಗೆ ಅನಿರೀಕ್ಷಿತ ಭೇಟಿ ನಡೆಸುವರು. ಸಂಜೆ 5.30ರಿಂದ 6.30 ಗಂಟೆವರೆಗೆ ಕೃಷಿ ವಿವಿಯ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆಗೆ ಸಂಬಂಧಿಸಿದ ಕಾನೂನು ಸಾಕ್ಷರತಾ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ರಾತ್ರಿ 8.30ಕ್ಕೆ ಕೃಷಿ ವಿವಿ ಅತಿಥಿ ಗೃಹದಲ್ಲಿ ಊಟದ ನಂತರ ವಾಸ್ತವ್ಯ ಮಾಡುವರು.

## ನಗರ ರಸ್ತೆಯಲ್ಲಿ ಹೆಚ್ಚುತ್ತಿರುವ ಅಪಘಾತಗಳು



**ಸಿರುಗುಪ್ಪ, ಆ.27–** ನಗರದ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ 150ಎ ರಲ್ಲಿ ಸತತ ಮಳೆಯಿಂದಾಗಿ ದೊಡ್ಡ ಪ್ರಮಾಣದಲ್ಲಿ ಗುಂಡಿಗಳು ಬಿದ್ದಿದ್ದು, ನಿತ್ಯವು ಈ ರಸ್ತೆಯಲ್ಲಿ ಸಾರ್ವಜನಿಕರು ವಾಹನಗಳೊಂದಿಗೆ ಸಂಚರಿಸಲು ಗೋಳಾಡುವ ಪರಿಸ್ಥಿತಿ ಉಂಟಾಗಿದೆ.

ತಾಲೂಕಿನಲ್ಲಿ ಮಳೆ ಬಂದರೆ ಸಾಕು ಗುಂಡಿಗಳ ದರ್ಭಾರು ಮಳೆ ಬರದೇ ಹೋದರೆ ಧೂಳು ಕಾಟಕ್ಕೆ ತಾಲೂಕಿನ ಜನತೆ ದಿನೇ ದಿನೇ ಬೇಸೆತ್ತು ಹೋಗಿದ್ದಾರೆ. ಮದುವೆ, ಕಾರ್ಯಕ್ರಮ, ಕೆಲಸದ ಚಟುವಟಿಕೆಗಳಿಗೆ ಸಿರುಗುಪ್ಪ ನಗರಕ್ಕೆ ಬೇರೆ ಬೇರೆ ತಾಲೂಕು, ಜಿಲ್ಲೆಯಿಂದ ಆಗಮಿಸುವ ಜನರು ಸಿರುಗುಪ್ಪ ಎಂದರೆ ಸಾಕು ಧೂಳು ಅಥವಾ ಗುಂಡಿಗಳಿಂದ ಬೇಸತ್ತು ಹೋಗಿದ್ದಾರೆ.

ಗುರುವಾರ ಇಬ್ರಾಹಿಂಪುರ ಗ್ರಾಮದಲ್ಲಿ ಕೆಕೆಆರ್ ಟಿಸಿ ಬಸ್ ಗುಂಡಿಯಲ್ಲಿ ಸಿಕ್ಕು ಪ್ರಯಾಣಿಕರು ಪರದಾಡುವಂತಾಯಿತು.

ಅಲ್ಲದೇ ಸಿರುಗುಪ್ಪ ನಗರದ ಆಕ್ಸಿಸ್ ಬ್ಯಾಂಕ್ ಮುಂಭಾಗದಲ್ಲಿ ನೀರಿನ ಟ್ಯಾಂಕರ್ ಉರುಳಿಬಿದ್ದಿದೆ. ಇದರಿಂದಾಗಿ ತಾಸುಗಟ್ಟಲೆ ಸಮಚಾರ ವ್ಯತ್ಯಯಗೊಂಡಿತು.

ಹೆಸರಿಗಷ್ಟೇ ರಾಷ್ಟ್ರೀಯ ಹೆದ್ದಾರಿ ಆದರೆ ಇಲ್ಲಿನ ದೊಡ್ಡ ದೊಡ್ಡ ಗುಂಡಿಗಳಿಂದಾಗಿ ನಿತ್ಯವೂ ಸಾರ್ವಜನಿಕರು ಪರಿತಪಿಸುವಂತಾಗಿದೆ.

ನಗರದ ದೇವಲಾಪುರ ಕ್ರಾಸ್ ನಿಂದ ಧಡೇಸೂಗೂರು ವರೆಗಿನ ಕೇವಲ ಎಂಟು ಕಿಮೀ ಪ್ರಯಾಣಿಸಲು ಒಂದು ಗಂಟೆ ಸಮಯ ತೆಗೆದುಕೊಳ್ಳುತ್ತದೆ ಎಂದು ವಕೀಲ ಯು.ವೆಂಕೋಬ ಬೇಸರ ವ್ಯಕ್ತಪಡಿಸಿದರು.

## ಬಸವ ನಗರದಲ್ಲಿ ಗುರು ಬಸವ ಚರಿತ್ರೆ ಪ್ರವಚನ ಸಮಾರೋಪ

**'ಬೀದರ್,ಆ.27–** ಕಿತ್ತೂರು ರಾಣಿ ಚೆನ್ನಮ್ಮ ವೃತ್ತದ ಬಸವನಗರ ಬಡಾವಣೆಯ ಉದ್ಯಾನದಲ್ಲಿ, ನೀಲಮ್ಮನ ಬಳಗದ ವತಿಯಿಂದ ಆಯೋಜಿಸಲಾದ "ಶ್ರೀ ಗುರು ಬಸವ ಚರಿತ್ರೆ ಪ್ರವಚನ"ದ ಒಂದು ತಿಂಗಳ ಪ್ರವಚನ ಸರಣಿಯ ಸಮಾರೋಪ ಸಮಾರಂಭ ಭಾನುವಾರ ನಡೆಯಿತು.

ಸಮಾರಂಭದಲ್ಲಿ ಮಾತನಾಡಿದ ಶರಣೆಯಾದ ವಿದ್ಯಾವತಿ ಬಿ. ಉಂಡೆ ಅವರು, "ವಿಶ್ವಗುರು ಬಸವಣ್ಣನವರ ವಚನಗಳನ್ನು ಕಟ್ಟು ನಿಟ್ಟಾಗಿ ಪಾಲಿಸಿದರೆ ಜೀವನದಲ್ಲಿ ದುಃಖಗಳು ಬರುವುದಿಲ್ಲ. ಎಲ್ಲರೂ ಪ್ರಾಮಾಣಿಕರಾಗಿದ್ದುಕೊಂಡು ಕಾಯಕ ಜೀವನ ನಡೆಸಬೇಕು. ವಚನಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ನೆಮ್ಮದಿಯ ಜೀವನ ಸಾಗಿಸಲು ಸಾಧ್ಯ" ಎಂದು ಅಭಿಪ್ರಾಯಪಟ್ಟರು.ಹಿರಿಯ ನಾಗರಿಕರ ರಾಜ್ಯ ಪ್ರಶಸ್ತಿ ಪುರಸ್ಕೃತ ವೀರಭದ್ರಪ್ಪ ಉಪ್ಪಿನ ಅವರು, "ಮಹಿಳೆಯರು ಒಗ್ಗಟ್ಟಾಗಿ ನೀಲಮ್ಮನ ಬಳಗವನ್ನು ಕಟ್ಟಿಕೊಂಡು, ಭಜನೆ ಮತ್ತು ಪ್ರವಚನದಂತಹ ಚಟುವಟಿಕೆ ನಡೆಸುತ್ತಿರುವುದು ಶ್ಲಾಘನೀಯ" ಎಂದು ಹೇಳಿದರು.ಕಾರ್ಯಕ್ರಮಕ್ಕೆ ಜ್ಯೋತಿ ಬೆಳಗಿಸುವುದರ ಮೂಲಕ ಚಾಲನೆ ನೀಡಲಾಯಿತು. ಮಹಾನಂದ ಸ್ವಾಗತಿಸಿದರು, ರಾಣಿಯವರು ವಂದಿಸಿದರು. ಸಮಾರಂಭದಲ್ಲಿ ಆರ್ಟ್ ಗ್ಯಾಲರಿಯ ನಿವೃತ್ತ ಚಿತ್ರಕಲಾ ಶಿಕ್ಷಕರಾದ ಚಂದ್ರಶೇಖರ ಸೋಮಶೆಟ್ಟಿ ಅವರಿಗೆ ವಿಶೇಷ ಸನ್ಮಾನ ಸಲ್ಲಿಸಲಾಯಿತು. ಬಡಾವಣೆಯ ಹಿರಿಯ ನಾಗರಿಕರಿಗೂ ಗೌರವಿಸಲಾಯಿತು.

ಬಸವರಾಜ ಉಂಡೆ, ಸುಧೀರ್ ರಾಗಾ, ಶರಣಪ್ಪ ಗುಣವಂತ, ವಿಜಯಕುಮಾರ ಪಾಟೀಲ, ಬಸಣ್ಣ ಬುಡ್ಡಾನೋರ, ಬೆಟ್ಟದ, ಮಮತಾ, ಆಶಾ, ವನಮಾಲಾ, ಕವಿತಾ, ವಿದ್ಯಾವತಿ ಪಾಟೀಲ, ಮಂಗಳ, ರತ್ನಮ್ಮ ಇದ್ದರು.

## ಉಡಮಗಲ್ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಗೌರಿ ಹಬ್ಬ ಆಚರಣೆ ವಿವಾಹಿತ ಮಹಿಳೆಯರಿಗೆ ಬಾಗಿನ



ಯುವ ಮಾರ್ಗ ಸುದ್ದಿ

**ರಾಯಚೂರು,ಆ.27–**ತಾಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರ ಉಡಮಗಲ್ ಕೇಂದ್ರದಲ್ಲಿ ಹಿಂದೂ ಧರ್ಮದ ಪವಿತ್ರ ಹಬ್ಬಗಳಲ್ಲಿ ಒಂದಾಗಿರುವ ಗೌರಿ ಹಬ್ಬ ನಿಮತ್ಯವಾಗಿ ಮಹಿಳೆಯರಿಗೆ ಬಾಗಿನ ನೀಡುವ ಕಾರ್ಯವನ್ನು ಪಿಪಿಹೆಚ್ಎಫ್ ಜಿಇ ವತಿಯಿಂದ ಮಂಗಳವಾರದಂದು ಹಮ್ಮಿಕೊಂಡಿದ್ದರು.

ಪೀಪಲ್‌ಟುಪೀಪಲ್ ಹೆಲ್ತ್ ಫೌಂಡೇಶನ್ ನವರು ಆಯೋಜಿಸಿದ್ದ ಮಹಿಳೆಯರಿಗೆ ಬಾಗಿನ ಅರ್ಪಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಪ್ರಾಥಮಿಕ ಆರೋಗ್ಯ ಕೇಂದ್ರ ಉಡಮಗಲ್ ವೈದ್ಯಕೀಯ ಅಧಿಕಾರಿ ಡಾ.ಫರಾ ನಸ್ರೀನ್ ಅವರು ಮಾತನಾಡಿದರು.'ಕುಟುಂಬದಲ್ಲಿ ಹೆಣ್ಣು ಸಂಸಾರದ ಕಣ್ಣು ಆಗಿರುತ್ತಾರೆ. ಅವರನ್ನು ಗೌರವಿಸುವ ಮನೋಭಾವ ಮುಖ್ಯವಾಗಬೇಕು. ಯಾವುದೇ ಕ್ಷೇತ್ರ ಇರಲಿ ಮಹಿಳೆಯರು ಉತ್ತಮ ಸಾಧನೆ ಮಾಡುತ್ತಿದ್ದಾರೆ' ಎಂದರು.

ಇದೇ ಸಂದರ್ಭದಲ್ಲಿ ನೂರಾರು ಮಹಿಳೆಯರಿಗೆ ಫೌಂಡೇಶನ್ ಸಿಬ್ಬಂಧಿ ನರಸಮ್ಮ ಹಾಗೂ ಆಶಾ ಕಾರ್ಯಕರ್ತರರು ಗ್ರಾಮದ ವಿವಾಹಿತ ಮಹಿಳೆಯರಿಗೆ ಅರಿಶಿನ,ಕುಂಕುಮ ಹಸಿರು ಬಳೆಗಳು, ಕುಪ್ಪಸ , ಕೆಲವು ಧಾನ್ಯ ಪ್ಯಾಕೆಟ್ ಬಾಗಿನ ನೀಡಿ ಮಹೆಂದಿಯನ್ನ ಹಾಕಲಾಯಿತು. ಈ ಬಾಗಿನ ಕಾರ್ಯಕ್ರಮದ ಮುಖಾಂತರ ಮಹಿಳೆಯರಿಗೆ ಸಂತೋಷಪಡಿಸಲಾಯಿತು ಮತ್ತು ಆರೋಗ್ಯದ ಕಡೆ ಗಮನ ವಹಿಸಬೇಕೆಂದು ಸರ್ವಿಕಲ್ ಕ್ಯಾನ್ಸರ್ ,ಬ್ರೆಸ್ಟ್ ಕ್ಯಾನ್ಸರ್ ,ಓರಲ್ ಕ್ಯಾನ್ಸರ್, ದ ಕುರಿತು ಮಾಹಿತಿಯನ್ನು ತಿಳಿಸಲಾಯಿತು. ಮತ್ತು ರೋಗ್ಯದ ಕಡೆ ಗಮನ ಕೊಡದೆ ಇರುವ ಮಹಿಳೆಯರಿಗೆ ಈ ಕಾರ್ಯಕ್ರಮದ ಮೂಲಕ ಹೊರತರಲಾಯಿತು ಮತ್ತು ಪರೀಕ್ಷೆಯನ್ನು ಮಾಡಿಸಲಾಯಿತು.

ಮಹಿಳೆಯರಿಗೆ ಸಂತೋಷಪಡಿಸಲು ಮ್ಯೂಸಿಕಲ್ ಚೇರ್ ಆಟವನ್ನ ಆಡಿಸಿ ಸಂತೋಷದ ಕ್ಷಣವನ್ನ ಏರ್ಪಾಡು ಮಾಡಿದ್ದರು. ಹಾಗೂ ಜಿಂಗಲ್ ವಿಡಿಯೋವನ್ನು ಪ್ರೊಜೆಕ್ಟರ್ ಮೂಲಕ ತೋರಿಸಲಾಯಿತು. ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಉಡಂಗಲ್ ಈ ಮಹಿಳೆಯರಿಗೆ ಉಚಿತವಾಗಿ ಬಿಪಿ ಶುಗರ್ ಪರೀಕ್ಷೆ. ಕಣ್ಣು ಪರೀಕ್ಷೆ ,ದಂತ ಪರೀಕ್ಷೆ, ಮಾಡಲಾಯಿತು. ವೈದ್ಯಕೀಯ ಅಧಿಕಾರಿ ಡಾ. ಫರಾ ನಸ್ರೀನ್ ಕಾರ್ಯಕ್ರಮ ವ್ಯವಸ್ಥಾಪಕರು ಮಲೈಕಾ ಅಮೀನ್,ಪಿಪಿಹೆಚ್ಎಫ್‌ನ ಸಿಬ್ಬಂಧಿ ನರಸಮ್ಮ ಸಂಧ್ಯಾ ಸಲ್ಮಾ ಪೂಜಾ ನಾಗರತ್ನ ರಮೇಶ್ ಆಶಾ ಕಾರ್ಯಕರ್ತರು ಸ್ವಯಂಸೇವಕರು ಗ್ರಾಮಸ್ಥರು ಇದ್ದರು



## ಸಿರವಾರ 4 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವ–ಶಾಸಕರಿಂದ ಭೂಮಿ ಪೂಜೆ



ಯುವ ಮಾರ್ಗ ಸುದ್ದಿ

**ಸಿರವಾರ, ಆ.27–**ಗ್ರಾಮೀಣ ಭಾಗದ ಶಿಕ್ಷಣ, ಆರೋಗ್ಯ, ಕುಡಿಯುವ ನೀರು, ರಸ್ತೆ, ಚರಂಡಿ ಸೇರಿದಂತೆ ಸರ್ವಾಂಗಣ ಅಭಿವೃದ್ದಿಗಾಗಿ ಹೆಚ್ಚಿನ ಅನುದಾನವನ್ನು ನೀಡಲಾಗುತ್ತಿದೆ. ಸಿರವಾರ ತಾಲೂಕು ಅಭಿವೃದ್ಧಿಗೆ ನಮ್ಮ ಸರ್ಕಾರದ ಬದ್ಧವಾಗಿದೆ. ಅಲ್ಲದೆ ವಿಶೇಷವಾಗಿ ಗ್ರಾಮೀಣ ಭಾಗದ ಅಭಿವೃದ್ಧಿಗಾಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಹೆಚ್ಚಿನ ಅನುದಾನವನ್ನು ನೀಡುತ್ತಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್. ಎಸ್. ಬೋಸರಾಜು ಅವರು ತಿಳಿಸಿದರು.

ಸಿರವಾರ ತಲೂಕಿನ ಮಲ್ಲಟ, ಬಲ್ಲಟಗಿ, ಕೆ ಗುಡದಿನ್ನಿ ಸೇರಿ ವಿವಿಧೆಡೆ 4 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮಂಗಳವಾರ ಅವರು ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ರಾಜ್ಯದಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಅನೇಕ ಜನಪರ ಯೋಜನೆಗಳನ್ನು ರೂಪಿಸುತ್ತಾ ಕಲ್ಯಾಣ ಭಾಗದ ಜನರ ಸಮಸ್ಯೆಗಳ ಇತ್ಯರ್ಥಕ್ಕೆ ಪ್ರಮಾಣಿಕವಾಗಿ ಪ್ರಯತ್ನಿಸಲಾಗುತ್ತಿದೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ನಮ್ಮ ಸರ್ಕಾರ ಹೆಚ್ಚಿನ ಅನುದಾನದೊಂದಿಗೆ ಸರ್ವಾಂಗೀಣ ಅಭಿವೃದ್ಧಿಗಾಗಿ ಬದ್ದವಾಗಿದೆ ಎಂದು ಅಭಿಪ್ರಯ ವ್ಯಕ್ತಪಡಿಸಿದರು


ಸಿರವಾರ ತಾಲೂಕಿನ ಮಲ್ಲಟ ಗ್ರಾಮದಲ್ಲಿ 10 ಲಕ್ಷ ರೂ ವೆಚ್ಚದ ಕೆಕೆಆರ್‌ಡಿಬಿಯ ಮೈಕ್ರೋ ಯೋಜನೆ ಅಡಿಯಲ್ಲಿ ಸಿಸಿ ರಸ್ತೆ ಕಾಮಗಾರಿ ಹಾಗೂ ಸರ್ಕಾರಿ ಪ್ರೌಢಶಾಲೆ ಗೆ 17–50 ಲಕ್ಷ ರೂ ನ ಶಾಲಾ ಕೊಠಡಿ ನಿರ್ಮಾಣ ಕಾಮಗಾರಿ ಭೂಮಿ ಪೂಜೆ ಮಾಡಿದರು.

ಸಿರವಾರ ತಾಲೂಕಿನ ಬಲ್ಲಟಗಿ ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಮ್ಯಾಕ್ರೋ ಯೋಜನೆಯ ಅಡಿಯಲ್ಲಿ 20. 87 ಲಕ್ಷ ಬಸ್ ಸೆಲ್ಟರ್ ನಿರ್ಮಾಣ, 25 ಲಕ್ಷ ರೂ ವೆಚ್ಚದಲ್ಲಿ ಸಮುದಾಯ ಭವನ ನಿರ್ಮಾಣ ಕಾಮಗಾರಿ, 30.27 ಲಕ್ಷ ರೂ ವೆಚ್ಚದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕಾಂಪೌಂಡ್ ವಾಲ್ ನಿರ್ಮಾಣ, ಬಲ್ಲಟಗಿಯ ಲಮಾಣಿ ಕ್ಯಾಂಪನಲ್ಲಿ 1 ಕೋಟಿ 24 ಲಕ್ಷ ರೂ ವೆಚ್ಚದಲ್ಲಿ ಬಲ್ಲಟಗಿಯ ಆಂಜನೇಯ ಕ್ಯಾಂಪ್ ವರೆಗೆ ರಸ್ತೆ ಡಾಂಬರಿಕರಣ ಸೇರಿ ಸುಮಾರು ಕೆಕೆಆರ್‌ಡಿಬಿಯ ಮುಖ್ಯಮಂತ್ರಿಗಳ ವಿವೇಚನಾ ನಿಧಿಯಿಂದ 50 ಲಕ್ಷ ರೂ ಸಿಸಿ ರಸ್ತೆ ಕಾಮಗಾರಿಗಳು ಹಾಗೂ ಕೆಕೆಆರ್ ಡಿಬಿಯ ಮ್ಯಾಕ್ರೋ ಅನುದಾನದಡಿ 45 ಲಕ್ಷ ರೂ ವೆಚ್ಚದಲ್ಲಿ ವಿವಿಧಡೆ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ವೈ.ಶರಣಯ್ಯ ನಾಯಕ, ಬ್ರಿಜೇಶ ಪಾಟೀಲ್, ಮಾಜಿ ಜಿ.ಪಂ ಸದಸ್ಯರಾದ, ಗಂಗಣ್ಣ ಸಾಹುಕಾರ, ಕಿರಿಲಿಂಗಪ್ಪ ಕವಿತಾಳ, ಜಿ.ಶಿವರಾಜ ನಾಯಕ ವಕೀಲರು, ಶಾಂತಪ್ಪ, ಬಲ್ಲಟಗಿ ಅಮರೇಶಪ್ಪ, ಶಿವಮೂರ್ತಿ, ಎಂ.ಶ್ರೀನಿವಾಸ, ಮಲ್ಲಟ ಮಲ್ಲಿಕಾರ್ಜುನ, ಅಮರೇಗೌಡ ಹಂಚಿನಾಳ, ರುದ್ರಪ್ಪ ಅಂಗಡಿ, ದೇವೆಂದ್ರಪ್ಪ ಬೊಮ್ಮನಾಳ, ದಾನನಗೌಡ ಸಿರವಾರ, ಚಂದ್ರು ಕಳಸ, ಬಸವರಾಜ ಪಾಟೀಲ್, ಯಂಕನಗೌಡ ಬಲ್ಲಟಗಿ, ಪಿ.ಶಂಕರಗೌಡ ಬಲ್ಲಟಗಿ, ಸಿ.ಹೆಚ್.ರವಿಕುಮಾರ್, ಮಲ್ಲಿಕಾರ್ಜುನ ವಾಲ್ಮೀಕಿ ಮಲ್ಲಟ, ನಾಗಪ್ಪ ನವಲಕಲ್, ರಮೇಶ ದರ್ಶನಕರ್, ಬೀರಪ್ಪ, ಶಿವಣ್ಣ, ಸಿ.ಹೆಚ್. ಪ್ರವೀಣ, ನಾಗರಾಜ, ಜೆಇ ರಾಘವೇಂದ್ರ, ರಾಮಣ್ಣ ಯಾದವ್, ಬಜ್ಜಣ್ಣ, ತಿಮ್ಮಣ್ಣ ನಾಯಕ ಹರವಿ, ಮಾರೇಶ ಬಂಡಾರಿ, ಮಲ್ಲಯ್ಯ ಚಾಗಭಾವಿ, ಮಾರೆಪ್ಪ ಗುಡಸಲಿ, ರಂಗಾರೆಡ್ಡಿ ನಾಯಕ ಸೇರಿದಂತೆ ಅನೇಕರು ಇದ್ದರು.

## ಗಜಾನನೋತ್ಸವ– ಗಣೇಶ ಪ್ರತಿಷ್ಠಾಪನೆಯಲ್ಲಿ ಸಚಿವ ಎನ್.ಎಸ್ ಬೋಸರಾಜು ಬಾಗಿ

ಯುವ ಮಾರ್ಗ ಸುದ್ದಿ



**ರಾಯಚೂರು,ಆ.27–**ಮುನ್ನೂರು ಕಾಪು ಸಮಾಜ, ಗಂಜ್, ಯರಮರಸ್, ಚಂದ್ರ ಮೌಳೇಶ್ವರ ಗಜಾನನ ಮಂಡಳಿ ಸೇರಿ ವಿವಿಧ ಮಂಡಳಿ ಹಾಗೂ ವೀರಾಂಜನೇಯ ದೇವಸ್ಥಾನ ಗಜಾನನ ಮಂಡಳಿ ವತಿಯಿಂದ ಗಣೇಶ ವಿಗ್ರಹಗಳ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್ ಎಸ್.ಬೋಸರಾಜು ಅವರು ಭಾಗವಹಿಸಿ ವಿಘ್ನ ವಿನಾಯಕ, ಶ್ರೀಗಜಾನನ ಗೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಮಹಾ ಮಂಗಳಾರತಿ ಮಾಡಿ ನಾಡಿನ ಸಮಸ್ತ ಜನತೆಗೆ ಒಳಿತಾಗಲಿ ಎಂದು ಪ್ರಾರ್ಥಿಸಿದರು.

ನಾಡಿನ ಸಮಸ್ತ ಜನತೆಗೆ ವಿಘ್ನ ವಿನಾಯಕನಾದ ಶ್ರೀ ಗಣೇಶನ ಆಶೀರ್ವಾದವಿರಲಿ. ಎಲ್ಲರಿಗೂ ಒಳಿತಾಗಲಿ ಎಂದು ಪ್ರಾರ್ಥಿಸಿ ಪೂಜೆ ಸಲ್ಲಿಸಿದರು.ಈ ಸಂದರ್ಭದಲ್ಲಿ ಹಿರಿಯರಾದ ಜಯಣ್ಣ, ಕೆ ಶಾಂತಪ್ಪ, ಕಾಂಗ್ರೆಸ್ ಮುಖಂಡರಾದ ಮೊಹ್ಮದ್ ಶಾಲಂ, ಜಿ ಶಿವಮೂರ್ತಿ, ಅಮರಡಗೌಡ ಹಂಚಿನಾಳ, ರುದ್ರಪ್ಪ ಅಂಗಡಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀನಿವಾಸ ರಡ್ಡಿ, ಬಸವರಾಜ ಪಾಟೀಲ್, ವಿಜಯರಾಜ ರೆಡ್ಡಿ, ಗೋವಿಂದ ರೆಡ್ಡಿ, ಪ್ರವೀಣ್ ಪೊಗಲ್, ಪ್ರತಾಪ್ ರಡ್ಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು

## ಸಿರವಾರ: ಅಂಗನವಾಡಿ ಸಹಾಯಕಿ ಹುದ್ದೆಗೆ ತಾತ್ಕಾಲಿಕ ಅಭ್ಯರ್ಥಿ ಆಯ್ಕೆ ಪಟ್ಟಿ ಬಿಡುಗಡೆ

**ಸಿರವಾರ,ಆ.27–**ಸಿರವಾರ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ ಬಾಗಲವಾಡ ಅಂಗನವಾಡಿ ಕೇಂದ್ರ ಸಂಖ್ಯೆ 1ರಲ್ಲಿ ಖಾಲಿ ಇದ್ದು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದು ಅರ್ಹ ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗಿದ್ದು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕಛೇರಿಯ ನೋಟಿಸ್ ಬೋರ್ಡ ಅಲ್ಲಿ ಹಚ್ಚಲಾಗಿದೆ. ಕಾರಣ ಸಾರ್ವಜನಿಕರು ಈ ಕುರಿತು ಅಕ್ಷೇಪಣೆಗೆ ಅರ್ಜಿ ಸಲ್ಲಿಸಲು ದಿನಾಂಕ 01–09–2025 ಇದ್ದು.

ಸಿರವಾರ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ ಬಾಗಲವಾಡ ಅಂಗನವಾಡಿ ಕೇಂದ್ರ ಸಂಖ್ಯೆ 1ರಲ್ಲಿ ಖಾಲಿ ಇದ್ದು ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಿದ್ದು ಅರ್ಹ ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗಿದ್ದು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕಛೇರಿಯ ನೋಟಿಸ್ ಬೋರ್ಡ ಅಲ್ಲಿ ಹಚ್ಚಲಾಗಿದೆ.

ಕಾರಣ ಸಾರ್ವಜನಿಕರು ಈ ಕುರಿತು ಅಕ್ಷೇಪಣೆಗೆ ಆಕ್ಷೇಪಣೆ ಸಲ್ಲಿಸಬಹುದಾಗಿಸೆ ಸಲ್ಲಿಸಲು ಸಿರವಾರ ತಾಲೂಕಿನ ಬಾಗಲವಾಡ ಗ್ರಾಮದ ಅಂಗನವಾಡಿ ಕೇಂದ್ರ ಸಂಖ್ಯೆ 08 ರ ಹುದ್ದೆಗೆ ಶಿವಲೀಲಾ ಮಹಾಂತೇಶ ಅವರು ಆಯ್ಕೆಯಾಗಿದ್ದು ಏನಾದರೂ ಆಕ್ಷೇಪಣೆಗಳಿದ್ದಲ್ಲಿ ಅಕ್ಟೋಬರ್ 01–09–025; ರಂದು ಸಂಜೆ 5 ಗಂಟೆವರೆಗೆ ಅವಕಾಶ ಇರುತ್ತದೆ. ತಡವಾಗಿ ಬಂದು ಅರ್ಜಿಗಳನ್ನು ತಗಲಾಗವುದಿಲ್ಲ

## ರಾಷ್ಟ್ರೀಯ ಪ್ರಶಸ್ತಿಗೆ ಶರಣಬಸವ ವಿಶ್ವವಿದ್ಯಾಲಯದ ಡಾ. ಶ್ರೀದೇವಿ ಕಲ್ಯಾಣ್ ಆಯ್ಕೆ



**ಕಲಬುರಗಿ,ಅ.27–** ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯದ ಡಾ. ಶ್ರೀದೇವಿ ಕಲ್ಯಾಣ್ ಅವರು ಕೇಂದ್ರ ಸರ್ಕಾರದ ಶಿಕ್ಷಣ ಸಚಿವಾಲಯದ, ಉನ್ನತ ಶಿಕ್ಷಣ ಇಲಾಖೆಯು 2025ರ ಶಿಕ್ಷಕರಿಗೆ ನೀಡುವ ರಾಷ್ಟ್ರೀಯ ಪ್ರಶಸ್ತಿಯನ್ನು ಪಡೆಯಲು ಆಯ್ಕೆ ಮಾಡಿದ ಉನ್ನತ ಶಿಕ್ಷಣ ಸಂಸ್ಥೆಗಳು ಮತ್ತು ಪಾಲಿಟೆಕ್ನಿಕ್‌ಗಳಿಂದ ದೇಶದ 21 ಶಿಕ್ಷಕರಲ್ಲಿ ಒಬ್ಬರಾಗಿದ್ದಾರೆ.

50,000 ರೂ. ನಗದು ಮತ್ತು ಬೆಳ್ಳಿ ಪದಕವನ್ನು ಹೊಂದಿರುವ ಪ್ರಶಸ್ತಿಯನ್ನು ಪಡೆಯಲು ಆಯ್ಕೆಯಾದ ಕರ್ನಾಟಕದ ಮೂವರು ಶಿಕ್ಷಕರಲ್ಲಿ ಡಾ. ಶ್ರೀದೇವಿ ಕಲ್ಯಾಣ್ ಕೂಡ ಒಬ್ಬರು. ಈ ವರ್ಷ ಸೆಪ್ಟೆಂಬರ್ 05 ರಂದು ನವದೆಹಲಿಯ ವಿಜ್ಞಾನ ಭವನದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ಅವರಿಗೆ ನೀಡಲಾಗುವುದು. ಪ್ರಶಸ್ತಿಯನ್ನು ಸ್ವೀಕರಿಸಲು ಆಯ್ಕೆಯಾದ ಕರ್ನಾಟಕದ ಇತರ ಇಬ್ಬರು ಶಿಕ್ಷಕರಿಗೆ ಉಡುಪಿಯ ಮಣಿಪಾಲ ತಂತ್ರಜ್ಞಾನ ಸಂಸ್ಥೆಯ ಡಾ. ಶೋಭಾ ಎಂ. ಇ. ಮತ್ತು ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನ ಪ್ರೊ. ಶ್ರೀವರ್ಧಿನಿ ಕೇಶವಮೂರ್ತಿ ಝಾ ಸೇರಿದ್ದಾರೆ.

ಪ್ರಶಸ್ತಿ ಸ್ವೀಕರಿಸಲು ಆಯ್ಕೆಯಾದ ಶಿಕ್ಷಕರು ಐಐಟಿಗಳು, ಐಐಎಂಗಳು, ಕೇಂದ್ರೀಯ ವಿಶ್ವವಿದ್ಯಾಲಯಗಳು, ಬಿರ್ಲಾ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಸೈನ್ಸ್, ಇಂಡಿಯನ್ ಇನ್ಸಿಟ್ಯೂಟ್ ಆಫ್ ಸ್ಪೇಸ್ ಸೈನ್ಸ್ ಅಂಡ್ ಟೆಕ್ನಾಲಜಿ (ಐಐಎಸ್‌ಟಿ), ತಿರುವನಂತಪುರ ಮತ್ತು ಇತರ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಸೇರಿದವರಾಗಿದ್ದಾರೆ.

ಡಾ. ಶ್ರೀದೇವಿ ಕಲ್ಯಾಣ್ ಅವರು ಪ್ರಸ್ತುತ ಶರಣಬಸವ ವಿಶ್ವವಿದ್ಯಾಲಯದ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದಲ್ಲಿ ಗಣಿತಶಾಸ್ತ್ರದ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಉನ್ನತ ಶಿಕ್ಷಣ ಇಲಾಖೆಯು ಶೈಕ್ಷಣಿಕ ಚಟುವಟಿಕೆಗಳ ಸಂಪೂರ್ಣ ವಿವರಗಳೊಂದಿಗೆ ಪ್ರಶಸ್ತಿಯನ್ನು ಸ್ವೀಕರಿಸಲು ಶಿಕ್ಷಕರಿಂದ ಅರ್ಜಿಗಳನ್ನು ಆಹ್ವಾನಿಸಿ, ಉನ್ನತ ಅಧ್ಯಯನ ಸಂಸ್ಥೆಗಳು ಮತ್ತು ತಜ್ಞರ ಎಂಟು ಸದಸ್ಯರ ತೀರ್ಪುಗಾರರು ವೈಯಕ್ತಿಕ ಶಿಕ್ಷಕರೊಂದಿಗೆ ಅವರ ಬೋಧನಾ ಚಟುವಟಿಕೆಗಳು, ಸಂಶೋಧನಾ ಪ್ರಕಟಣೆಗಳು, ಶೈಕ್ಷಣಿಕ ಪ್ರಗತಿ, ಅವರು ಅಳವಡಿಸಿಕೊಂಡ ನವೀನ ಬೋಧನಾ ವಿಧಾನಗಳು ಮತ್ತು ಅವರು ವಿದ್ಯಾರ್ಥಿಗಳನ್ನು ತಮ್ಮ ಶೈಕ್ಷಣಿಕ ಚಟುವಟಿಕೆಗಳಲ್ಲಿ ಹೇಗೆ ತೊಡಗಿಸಿಕೊಳ್ಳುತ್ತಾರೆ ಹಾಗೂ ವೈಯಕ್ತಿಕ ವಿದ್ಯಾರ್ಥಿಗಳಿಂದ ಉತ್ತಮವಾದದ್ದನ್ನು ಹೇಗೆ ಹೊರತರುತ್ತಾರೆ ಎಂಬುದರ ಕುರಿತು ವಿವರವಾದ ಆನ್‌ಲೈನ್ ಸಂದರ್ಶನವನ್ನು ನಡೆಸಿದರು.

ವಿಶ್ವವಿದ್ಯಾಲಯದ ಹಿರಿಯ ಅಧ್ಯಾಪಕರಲ್ಲಿ ಒಬ್ಬರಾದ ಡಾ. ಶ್ರೀದೇವಿ ಕಲ್ಯಾಣ್ ಅವರು ಇದುವರೆಗೆ ಪ್ರತಿಷ್ಠಿತ ನಿಯತಕಾಲಿಕೆಗಳಲ್ಲಿ 40 ಕ್ಕೂ ಹೆಚ್ಚು ಸಂಶೋಧನಾ ಲೇಖನಗಳನ್ನು ಪ್ರಕಟಿಸಿದ್ದಾರೆ ಮತ್ತು ಮೂರು ಪುಸ್ತಕಗಳನ್ನು ಪ್ರಕಟಿಸಿದ್ದಾರೆ.

ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ, ಶ್ರೀ ಬಸವರಾಜ ದೇಶಮುಖ, ವಿವಿಯ ಉಪಕುಲಪತಿ ಪ್ರೋ. ಅನಿಲಕುಮಾರ ಬಿಡವೆ, ಕುಲಸಚಿವ ಡಾ. ಎಸ್. ಜಿ. ಡೊಳ್ಳೇಗೌಡರ್, ಡೀನ್ ಡಾ. ಲಕ್ಷ್ಮಿ ಪಾಟೀಲ್ ಮಾಕಾ, ಕುಲಸಚಿವ(ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ ಸೇರಿದಂತೆ ಇತರರು ಡಾ. ಶ್ರೀದೇವಿ ಕಲ್ಯಾಣ್ ಅವರನ್ನು ಪ್ರಶಸ್ತಿಯೊಂದಿಗೆ ಶರಣಬಸವ ವಿಶ್ವವಿದ್ಯಾಲಯಕ್ಕೆ ಕೀರ್ತಿ ತಂದಿದ್ದಕ್ಕಾಗಿ ಅಭಿನಂದಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H